ಸಂಪುಟ : 10 ಸಂಚಿಕೆ: 142 ಪುಟ : 4+2 ಬೆಲೆ: 3.00 ಬುಧವಾರ ಜುಲೈ 09 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 142 Pages : 4+2 Price : 3.00 Wednesday July 09 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಜು.11ರಂದು ಗ್ಯಾರಂಟಿ ಜನತಾ ದರ್ಶನ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸರ್ಕಾರದ ಮಹತ್ವಾಕಾಂಕ್ಷಿ ಪಂಚ ಗ್ಯಾರಂಟಿ ಯೋಜನೆಗಳ ಪ್ರಯೋಜನ ಅರ್ಹ ಪ್ರತಿಯೊಬ್ಬರಿಗೂ ತಲುಪಬೇಕಾಗಿದ್ದು, ತಾಲೂಕು ಪಂಚ ಗ್ಯಾರಂಟಿ ಅನುಷ್ಠಾನ ಸಮಿತಿಯಿಂದ ಜುಲೈ 11ರಂದು ತಾ.ಪಂ ಸಭಾ ಭವನದಲ್ಲಿ ಜನತಾ ದರ್ಶನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ತಾಲೂಕು ಪಂಚ ಗ್ಯಾರಂಟಿ ಸಮಿತಿ ಅಧ್ಯಕ್ಷ ನಾಗರಾಜ ಮಡಿವಾಳರ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ. ಶಿವಕುಮಾರ ಹಾಗೂ ಪಂಚ ಗ್ಯಾರಂಟಿ ಸಮಿತಿ ರಾಜ್ಯಾಧ್ಯಕ್ಷ ಎಚ್.ಎಂ. ರೇವಣ್ಣ, ಜಿಲ್ಲಾ ಉಸ್ತುವಾರಿ ಸಚಿವ ಹೆಚ್.ಕೆ. ಪಾಟೀಲರು, ಪ್ರತಿ ತಾಲೂಕಿನಲ್ಲಿ ಪಂಚ ಗ್ಯಾರಂಟಿ ಸಮಿತಿ ವತಿಯಿಂದ ಜನತಾದರ್ಶನ ಮಾಡಿ ಯೋಜನೆಯಿಂದ ಯಾರೂ ವಂಚಿತರಾಗದಂತೆ ಕಾರ್ಯನಿರ್ವಹಿಸಬೇಕು ಎಂದಿದ್ದಾರೆ. ಈ ನಿಟ್ಟಿನಲ್ಲಿ ಜು.11ರಂದು ಬೆಳಿಗ್ಗೆ 11ರಿಂದ ಸಂಜೆ 5ರವರೆಗೆ ಪಂಚ ಗ್ಯಾರಂಟಿ ಯೋಜನೆಗಳಿಗೆ ಸಂಬಂಧಿಸಿದಂತೆ ಜನತಾ ದರ್ಶನ ನಡೆಯಲಿದೆ. ಗ್ಯಾರಂಟಿ ಯೋಜನೆಗೊಳಪಡುವ 5 ಇಲಾಖೆಯ ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳು, ಜಿಲ್ಲಾ ಅಧ್ಯಕ್ಷ ಬಿ.ಬಿ. ಅಸೂಟಿ, ಅನುಷ್ಠಾನ ಸಮಿತಿಯ ಸದಸ್ಯರು ಪಾಲ್ಗೊಳ್ಳುವರು.

ಲಕ್ಷ್ಮೇಶ್ವರ ಸೇರಿ ತಾಲೂಕಿನ 14 ಗ್ರಾ.ಪಂ ವ್ಯಾಪ್ತಿಯ ಗ್ಯಾರಂಟಿ ಯೋಜನೆಯ ಫಲಾನುಭವಿಗಳು, ಗ್ಯಾರಂಟಿ ಯೋಜನೆ ಪಡೆಯುವಲ್ಲಿ ಸಾಧ್ಯವಾಗಿರದವರು ತಮ್ಮ ಕುಂದು-ಕೊರತೆ, ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬಹುದು. ಮಾಹಿತಿಗಾಗಿ-9902109785 ಸಂಪರ್ಕಿಸಬಹುದು ಎಂದು ಅವರು ತಿಳಿಸಿದ್ದಾರೆ.

## ರಾಜ್ಯ ಸರ್ಕಾರಕ್ಕೆ ಹಿನ್ನಡೆ: ಜನೌಷಧಿ ಕೇಂದ್ರ ಸ್ಥಗಿತ ಆದೇಶಕ್ಕೆ ಹೈಕೋರ್ಟ್ ತಡೆ!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕರ್ನಾಟಕ ಸರ್ಕಾರ ಸಾರ್ವಜನಿಕ ಆಸ್ಪತ್ರೆ ಆವರಣದಲ್ಲಿರುವ ಜನೌಷಧ ಕೇಂದ್ರಗಳನ್ನು ಸ್ಥಗಿತಗೊಳಿಸಲು ಹೊರಡಿಸಿದ್ದ ಆದೇಶಕ್ಕೆ ರಾಜ್ಯ ಹೈಕೋರ್ಟ್ ತಡೆ ನೀಡಿದೆ. ನ್ಯಾಯಮೂರ್ತಿ ಎಂ.ಐ. ಅರುಣ್ ಅವರಿದ್ದ ಪೀಠ, ಸರ್ಕಾರದ ಆದೇಶದ ವಿರುದ್ಧ ಸಲ್ಲಿಸಲಾದ 16 ಸಾರ್ವಜನಿಕ ಹಿತಾಸಕ್ತಿಯ ಅರ್ಜಿಗಳ ವಿಚಾರಣೆ ನಡೆಸಿ, ಮುಂದಿನ ವಿಚಾರಣೆವರೆಗೆ ಆ ಕೇಂದ್ರಗಳನ್ನು ಸ್ಥಗಿತಗೊಳಿಸಬಾರದು ಎಂಬ ಮಧ್ಯಂತರ ತೀರ್ಪು ನೀಡಿದೆ.

ಇದಕ್ಕೂ ಮೊದಲು, ಆರೋಗ್ಯ ಇಲಾಖೆ ಸರ್ಕಾರಿ ಆಸ್ಪತ್ರೆಗಳ ಆವರಣದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಜನೌಷಧ ಕೇಂದ್ರಗಳನ್ನು ಮಾತ್ರ ಬಂದ್ ಮಾಡುವಂತೆ ಆದೇಶ ಜಾರಿ ಮಾಡಿತ್ತು. ಈ ಹಿನ್ನೆಲೆಯಲ್ಲಿ ಜಿಲ್ಲೆಯ ವಿವಿಧ ಆಸ್ಪತ್ರೆಗೆ ಸೇರಿದ ಜನೌಷಧ ಕೇಂದ್ರಗಳು ಮುಚ್ಚಲ್ಪಟ್ಟಿದ್ದು, ಬಡರೋಗಿಗಳಿಗೆ ಉಚಿತ ಅಥವಾ ಕಡಿಮೆ ಬೆಲೆಯ ಔಷಧ ಲಭ್ಯತೆ ಕಡಿಮೆಯಾಗಿತ್ತು.

ಸರ್ಕಾರ ಈ ಕ್ರಮವನ್ನು ನ್ಯಾಯೀಕರಿಸಲು ಸಾರ್ವಜನಿಕ ಆಸ್ಪತ್ರೆಗಳಲ್ಲಿ ಬ್ರಾಂಡೆಡ್ ಔಷಧಿ ಬದಲು ಜನೌಷಧಿಗಳನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಹೊರಗಿನ ಔಷಧಿಗಳನ್ನು ಶಿಫಾರಸು ಮಾಡಬಾರದು ಎಂಬ ನಯವಂತಿಕೆ ತೊಡಗಿಸಿಕೊಂಡಿದೆ.

### ಸಮುದಾಯ ವಿಜ್ಞಾನ ಮಹಾವಿದ್ಯಾಲಯದ ಪದವೀಧರರ ಸಂಘ ಉದ್ಘಾಟಿಸಿದ ಸಚಿವೆ ಲಕ್ಷ್ಮೀ ಹೆಬ್ಬಾಳಕರ್

# ಸಿಕ್ಕ ಅವಕಾಶದ ಸದುಪಯೋಗ ಪಡೆಯಿರಿ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಮುಂದಿನ ನೇಮಕಾತಿ ಸಂದರ್ಭದಲ್ಲಿ ಸಮುದಾಯ ವಿಜ್ಞಾನ ಪದವೀಧರರಿಗೆ ಕನಿಷ್ಠ ಶೇ.20ರಿಂದ 25ರಷ್ಟು ಮೀಸಲಾತಿ ನೀಡಲು ಕ್ರಮ ಕೈಗೊಳ್ಳುವುದಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಭರವಸೆ ನೀಡಿದರು.

ಗ್ರಾಮೀಣ ಗೃಹ ವಿಜ್ಞಾನ ಮಹಾವಿದ್ಯಾಲಯ, ಸಮುದಾಯ ವಿಜ್ಞಾನ ಮಹಾವಿದ್ಯಾಲಯದ ಪದವೀಧರರ ಸಂಘವನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ನನ್ನ ಇಲಾಖೆಗೆ ಅಗತ್ಯವಾದ ಕೌಶಲ್ಯಗಳನ್ನು ಇಲ್ಲಿ ಕಲಿಸಲಾಗುತ್ತದೆ. ಇಲ್ಲಿ ಪದವಿ ಪಡೆದವರು ನಮ್ಮ ಇಲಾಖೆಗೆ ಹೆಚ್ಚು ಸೂಕ್ತವಾಗುತ್ತಾರೆ. ಈಗಾಗಲೇ ಸಾಕಷ್ಟು ಜನ ಕೆಲಸ ಮಾಡುತ್ತಿದ್ದಾರೆ. ಮುಂದಿನ ನೇಮಕಾತಿ ಸಂದರ್ಭದಲ್ಲಿ ಹೆಚ್ಚು ಆದ್ಯತೆ ನೀಡುವ ಸಂಬಂಧ ಮುಖ್ಯಮಂತ್ರಿಗಳ ಜೊತೆ ಚರ್ಚೆ ನಡೆಸುವೆ. ಜೊತೆಗೆ ಗ್ರಾಮೀಣಾಭಿವೃದ್ಧಿ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರ ಜೊತೆಗೂ ಚರ್ಚೆ ನಡೆಸಿ ಕೂಸಿನ ಮನೆ ಸೇರಿದಂತೆ ವಿವಿಧ ಯೋಜನೆಗಳಲ್ಲಿ ಸಮುದಾಯ ವಿಜ್ಞಾನ ಪದವೀಧರರಿಗೆ ಹೆಚ್ಚು ಅವಕಾಶ ಸಿಗುವಂತೆ ನೋಡಿಕೊಳ್ಳುತ್ತೇನೆ ಎಂದು ಹೇಳಿದರು.




ಈಗ ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಸಮಾಜ ಬಹಳಷ್ಟು ಬದಲಾಗಿದೆ. ಗಂಡಸರ ಯೋಚನಾ ರೀತಿ ಸಹ ಬದಲಾಗಿದೆ. ಗಂಡು-ಹೆಣ್ಣು ಎಂಬ ಬೇಧ-ಭಾವ ಉಳಿದಿಲ್ಲ. ಎಲ್ಲರನ್ನೂ ಸಮಾನ ದೃಷ್ಟಿಯಿಂದ ನೋಡಲಾಗುತ್ತಿದೆ. ನಮ್ಮ ದೇಶದ ಸಕಾರಾತ್ಮಕ ಬೆಳವಣಿಗೆಗೆ ಇದು ಕೂಡ ಕಾರಣವಾಗಿದೆ ಎಂದು ಹೇಳಿದರು.

ಧಾರವಾಡವನ್ನು ವಿದ್ಯಾಕಾಶಿ ಎಂದು ಕರೆಯುತ್ತೇವೆ. ಇಲ್ಲಿಯ ಕರ್ನಾಟಕ ವಿಶ್ವವಿದ್ಯಾಲಯ ಹಾಗೂ ಕೃಷಿ ವಿಶ್ವವಿದ್ಯಾಲಯಗಳು ನಮ್ಮ ಹೆಮ್ಮೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಬಣ್ಣಿಸಿದರು.

ಈ ವೇಳೆ ಕೃಷಿ ವಿಜ್ಞಾನ ವಿಶ್ವವಿದ್ಯಾಲಯದ ಕುಲಪತಿ ಡಾ. ಪಿ.ಎಲ್. ಪಾಟೀಲ, ವಿದ್ಯಾಧಿಕಾರಿ ಡಾ. ಲತಾ ಪೂಜಾರ್, ನಿವೃತ್ತ ಡೀನ್ ಪುಷ್ಪ ಖಾದಿ, ಪದವೀಧರರ ಸಂಘದ ಅಧ್ಯಕ್ಷರಾದ ಡಾ. ಸರೋಜಿನಿ ಕರಕಣ್ಣವರ್, ಕಾರ್ಯದರ್ಶಿ ಡಾ. ವೀಣಾ ಜಾಧವ, ಜಂಟಿ ಕಾರ್ಯದರ್ಶಿ ಡಾ. ಸಾಧನಾ ಕುಳ್ಳೊಳ್ಳಿ, ಖಜಾಂಚಿ ಡಾ. ಮಂಜುಳಾ ಪಾಟೀಲ, ಸಹ ಖಜಾಂಚಿ ಡಾ. ಉಮಾ ಕುಲಕರ್ಣಿ, ಸದಸ್ಯರಾದ ಡಾ. ಹೇಮಲತಾ, ಡಾ. ರೇಣುಕಾ ಸಾಳುಂಕೆ, ಡಾ. ಗೀತಾ ಚಿಟಗುಬ್ಬಿ, ಡಾ. ಪ್ರೇಮಾ ಪಾಟೀಲ, ಡಾ. ರಾಜೇಶ್ವರಿ, ಮಾಳವಿಕಾ ಮೊಕಾಶಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

> ಈ ಹಿಂದೆ ಮಹಿಳೆಯರು ಅಡುಗೆ ಮನೆಗೆ ಸೀಮಿತರಾಗಿದ್ದರು. ಅಂತಹ ಸಂದರ್ಭದಲ್ಲಿ ಈ ಕಾಲೇಜು ಆರಂಭವಾಗಿದೆ. ಆ ಸಂದರ್ಭದಲ್ಲೂ ಸಾಕಷ್ಟು ಮಹಿಳೆಯರು ಈ ಕಾಲೇಜಿನಲ್ಲಿ ಪದವಿ ಪಡೆದಿದ್ದಾರೆ. ಕಲಿಯುವ ಉತ್ಸಾಹ ಇದ್ದರೆ ಎಲ್ಲವೂ ಸಾಧ್ಯ ಎನ್ನುವುದನ್ನು ತೋರಿಸಿದ್ದಾರೆ. ಕೆಲವರಿಗೆ ಅವಕಾಶ ಕಡಿಮೆ ಸಿಗಬಹುದು, ಕೆಲವರಿಗೆ ಜಾಸ್ತಿ ಸಿಗಬಹುದು. ಆದರೆ ಅದನ್ನು ಸದುಪಯೋಗಪಡಿಸಿಕೊಳ್ಳುವ ಮನೋಭಾವ ಬೇಕು.
>
> **– ಲಕ್ಷ್ಮೀ ಹೆಬ್ಬಾಳಕರ್.**
> **ಮಹಿಳಾ, ಮಕ್ಕಳ ಅಭಿವೃದ್ಧಿ ಸಚಿವರು.**

### ಶಿವಾನುಭವ ಕಾರ್ಯಕ್ರಮದಲ್ಲಿ ಸಭಾಪತಿ ಬಸವರಾಜ ಹೊರಟ್ಟಿಯವರನ್ನು ಸನ್ಮಾನಿಸಿದ ಡಾ. ತೋಂಟದ ಶ್ರೀಗಳು

# ಹೊರಟ್ಟಿಯವರ ಜೀವಮಾನದ ಸಾಧನೆ ಅಸಾಮಾನ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಕಳೆದ 5 ದಶಕಗಳಿಂದ ಸಾರ್ವಜನಿಕ ಬದುಕಿನಲ್ಲಿದ್ದು, ವಿಧಾನ ಪರಿಷತ್ ಸದಸ್ಯರಾಗಿ 45 ವರ್ಷಗಳನ್ನು ಪೂರೈಸಿದ ಸಭಾಪತಿ ಬಸವರಾಜ ಹೊರಟ್ಟಿಯವರ ಜೀವಮಾನದ ಸಾಧನೆಗಳು ಬೆರಗುಗೊಳಿಸುವಂಥದ್ದು. ಬಹುಶಃ ಇಂತಹ ಸಾಧನೆಯನ್ನು ದೇಶದ ರಾಜಕೀಯ ಇತಿಹಾಸದಲ್ಲಿ ಯಾರೂ ಮಾಡಲಾರರು ಎಂದು ಜಗದ್ಗುರು ತೋಂಟದಾರ್ಯ ಸಂಸ್ಥಾನಮಠದ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಅಭಿಪ್ರಾಯಪಟ್ಟರು.

ಅವರು ಲಿಂಗಾಯತ ಪ್ರಗತಿಶೀಲ ಸಂಘದ ಆಶ್ರಯದಲ್ಲಿ 2753ನೇ ಶಿವಾನುಭವ ಕಾರ್ಯಕ್ರಮದಲ್ಲಿ ಆಯೋಜಿಸಿದ್ದ ಬಸವರಾಜ ಹೊರಟ್ಟಿಯವರ ಬದುಕು, ಸಂಘಟನೆ, ಹೋರಾಟ, ಜೀವಮಾನದ ಸಾಧನೆ, ಸನ್ಮಾನ ಜೊತೆಗೆ ಅವರ ನಡೆದು ಬಂದ ದಾರಿ ಕುರಿತು ಅವಲೋಕನ, ವಚನ ಸಾಹಿತ್ಯ ಪಿತಾಮಹ ಫ.ಗು. ಹಳಕಟ್ಟಿ ಹಾಗೂ ಪೂಜ್ಯಶ್ರೀ ಲಿಂಗಾನಂದ ಮಹಾಸ್ವಾಮಿಗಳ ಕುರಿತು ಏರ್ಪಡಿಸಿದ್ದ ವಿಶೇಷ ಶಿವಾನುಭವದಲ್ಲಿ ಮಾತನಾಡಿದರು.

ಹೊರಟ್ಟಿಯವರ ಬದುಕು, ಹೋರಾಟ, ಸಂಘಟನೆ ಕುರಿತು ಪ್ರಾಚಾರ್ಯ ಶಿವಾನಂದ ಪಟ್ಟಣಶೆಟ್ಟಿಯವರು ಸುದೀರ್ಘವಾಗಿ ಮಾತನಾಡಿ, ಪ್ರಾಥಮಿಕ ಹಂತದಿಂದ ವಿಶ್ವವಿದ್ಯಾಲಯವರೆಗಿನ ಎಲ್ಲ ಶಿಕ್ಷಕರ ಹಿತ ಕಾಯ್ದುಕೊಂಡು ಬಂದವರು ಹೊರಟ್ಟಿಯವರು. ಅಲ್ಲದೇ ಶ್ರೀಮಠದ ಅಭಿವೃದ್ಧಿಯಲ್ಲಿಯೂ ಹೊರಟ್ಟಿಯವರ ಮಾರ್ಗದರ್ಶನವಿದೆ. ಹೀಗಾಗಿ ಶ್ರೀಮಠ ಅವರನ್ನು ಸದಾಕಾಲ ಗೌರವಿಸುತ್ತಾ ಬಂದಿದೆ ಎಂದರು. ವಚನ ಪಿತಾಮಹ ಫ.ಗು. ಹಳಕಟ್ಟಿ ಹಾಗೂ ಪೂಜ್ಯ ಲಿಂಗಾನಂದ ಮಹಾಸ್ವಾಮಿಗಳ ಕುರಿತು ಪ್ರಾಚಾರ್ಯ ರಮೇಶ ಕಲ್ಲನಗೌಡ್ರ ಉಪನ್ಯಾಸ ನೀಡಿ, ವಚನ ಸಾಹಿತ್ಯ ಇಂದು ಜೀವಂತವಾಗಿ ಉಳಿದಿದ್ದರೆ ಅದಕ್ಕೆ ಕಾರಣೀಭೂತರು ಫ.ಗು. ಹಳಕಟ್ಟಿಯವರು. ತಮ್ಮೆಲ್ಲ ಆಸ್ತಿಯನ್ನು ಮಾರಿ ಸಾಕಷ್ಟು ಸಮಸ್ಯೆಗಳನ್ನು ಎದುರಿಸಿ, ವಚನ ಸಾಹಿತ್ಯವನ್ನು ಮುದ್ರಣ ಮಾಡುವ ಮೂಲಕ ನಾಡಿಗೆ ಅತ್ಯಮೂಲ್ಯವಾದ ಕೊಡುಗೆಯನ್ನು ನೀಡಿದ್ದಾರೆ. ಪೂಜ್ಯ ಲಿಂಗಾನಂದರು ಕೂಡಾ ವಚನ ಸಾಹಿತ್ಯ, ಶರಣ ಸಾಹಿತ್ಯಕ್ಕೆ ಹೊಸತನ ತರುವ ಮೂಲಕ ಈ ಸಾಹಿತ್ಯ ಲೋಕವನ್ನು ಶ್ರೀಮಂತಗೊಳಿಸಿದ್ದಾರೆ ಎಂದರು. ಡಾ. ಬಸವರಾಜ ಧಾರವಾಡ ಮಾತನಾಡಿ, ಬಸವರಾಜ ಹೊರಟ್ಟಿಯವರು ಶಿಕ್ಷಕ ಸಮೂಹದ ಅತ್ಯಂತ ನಂಬಿಗಸ್ಥ ನಾಯಕರು. ಇಂತಹ ನಾಯಕರು ಕರ್ನಾಟಕದ ಶಿಕ್ಷಕರ ಪಾಲಿಗೆ ಸಿಕ್ಕಿದ್ದು ಭಾಗ್ಯವೇ ಸರಿ. ಇವರೊಬ್ಬ ನಾಡಿನ ಅಪರೂಪದ ನಾಯಕ ಹಾಗೂ ಇತರ ಜನಪ್ರತಿನಿಧಿಗಳಿಗೆ ಮಾದರಿಯಾದ ರಾಜಕಾರಣಿ ಎಂದರು.



ಸನ್ಮಾನ ಸ್ವೀಕರಿಸಿದ ಸಭಾಪತಿ ಬಸವರಾಜ ಹೊರಟ್ಟಿ ಮಾತನಾಡಿ, ನನ್ನೆಲ್ಲ ಶ್ರೇಯಸ್ಸು ನಾನು ನಂಬಿಕೊಂಡು ಬಂದ ಶಿಕ್ಷಕರ ಸಮೂಹಕ್ಕೆ ಸಲ್ಲಬೇಕು. ನಾ ಇಂದು ಏನೇ ಆಗಿದ್ದರೂ ಅದಕ್ಕೆ ಕಾರಣ ಶಿಕ್ಷಕರು. ನನ್ನ ತಾಯಿಯ ಆಶೀರ್ವಾದ, ನಮ್ಮ ತಂದೆಯ ಆದರ್ಶಗಳು ಶ್ರೀಮಠದ ಸಹಕಾರದಿಂದ ಸಾಧ್ಯವಾಗಿದೆ ಎಂದರು.

ಅಪೇಕ್ಷಾ ಎಸ್.ಹೊನಗಣ್ಣವರ ಧರ್ಮಗ್ರಂಥ ಪಠಣಗೈದರು. ವಚನ ಚಿಂತನವನ್ನು ಸೃಷ್ಟಿ ವಿ.ಪೂಜಾರ ಮಾಡಿದರು. ದಾಸೋಹ ಸೇವೆಯನ್ನು ನಿವೃತ್ತ ಶಿಕ್ಷಕ ಮಹಾಂತೇಶ ಹೂಗಾರ ಮತ್ತು ಕುಟುಂಬದವರು ವಹಿಸಿಕೊಂಡಿದ್ದರು. ವಚನ ಸಂಗೀತವನ್ನು ಮೃತ್ಯುಂಜಯ ಹಿರೇಮಠ ಹಾಗೂ ಗುರುನಾಥ ಸುತಾರ ನಡೆಸಿಕೊಟ್ಟರು. ವಿದ್ಯಾ ಪ್ರಭು ಗಂಜಾಳ ನಿರೂಪಿಸಿದರು. ಈ ಸಂದರ್ಭದಲ್ಲಿ ಕನಕದಾಸ ಶಿಕ್ಷಣ ಸಮಿತಿಯ ಅಧ್ಯಕ್ಷ ರವಿ ದಂಡಿನ, ಉದ್ದಿಮೆದಾರ ಅಶೋಕ ಜೈನ, ಎಸ್.ಎಂ. ಅಗಡಿ, ಕೊಟ್ರೇಶ ಅಂಗಡಿ, ಎಸ್.ಎಸ್. ಗಡ್ಡದ, ಹೆಚ್.ಡಿ. ಪೂಜಾರ, ರವಿ ಕೊಣ್ಣೂರು, ಎಂ.ಎಚ್. ಪೂಜಾರ, ಎಸ್.ಜಿ. ಕೋಲ್ಮಿ, ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡರ, ಉಪಾಧ್ಯಕ್ಷ ಉಮೇಶ ಪುರದ, ಕಾರ್ಯದರ್ಶಿ ವೀರಣ್ಣ ಗೋಟಡಕಿ, ಕೋಶಾಧ್ಯಕ್ಷ ಬಸವರಾಜ ಸಿ.ಕಾಡಪ್ಪನವರ, ಸಹ ಕಾರ್ಯದರ್ಶಿ ಸೋಮಶೇಖರ ಪುರಾಣಿಕ, ಸಂಘಟನಾ ಕಾರ್ಯದರ್ಶಿಗಳಾದ ಮಹೇಶ ಗಾಣಿಗೇರ, ನಾಗರಾಜ ಹಿರೇಮಠ, ಶಿವಾನುಭವ ಸಮಿತಿ ಚೇರಮನ್ ಆಯ್.ಬಿ. ಬೆನಕೊಪ್ಪ, ಶಿವಾನಂದ ಫ.ಹೊಂಬಳ ಮುಂತಾದವರು ಉಪಸ್ಥಿತರಿದ್ದರು.

## ಪರೀಕ್ಷೆಗಳಲ್ಲಿ ಉತ್ತಮ ಫಲಿತಾಂಶ ಸಾಧಿಸಿ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಕೃಷ್ಣಾಜಿ ರಂಗರಾವ್ ಕುಲಕರ್ಣಿ ಸರ್ಕಾರಿ ಪ್ರೌಢಶಾಲೆಗೆ ಭೇಟಿ ನೀಡಿದ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್ ಅವರು ಬಿಸಿಯೂಟದ ಗುಣಮಟ್ಟ ಪರಿಶೀಲಿಸಿ ವಿದ್ಯಾರ್ಥಿಗಳೊಂದಿಗೆ ಊಟ ಸವಿದರು. ಶಾಲೆಯ ವ್ಯವಸ್ಥೆ, ಬಿಸಿಯೂಟ, ಹಾಗೂ ಶಿಕ್ಷಕರ ಬೋಧನೆಯ ಕುರಿತು ವಿದ್ಯಾರ್ಥಿಗಳೊಂದಿಗೆ ಚರ್ಚಿಸಿದರು.

ಊಟದ ಬಳಿಕ ಕಂಪ್ಯೂಟರ್ ಲ್ಯಾಬ್‌ಗೆ ತೆರಳಿ ಪ್ರೊಜೆಕ್ಟರ್ ಬಳಕೆ, ಕಲಿಕಾ ವಿಧಾನ ಪರಿಶೀಲಿಸಿದರು. ಮಕ್ಕಳಿಗೆ ಗೂಗಲ್ ಫಾರ್ಮ್ ರಚನೆ, ಇತರೆ ಕ್ರಿಯಾತ್ಮಕ ಚಟುವಟಿಕೆಗಳನ್ನು ಭರತ್ ಅವರು ಕಲಿಸಿದರು.

ಭೂ ದಾನಿಗಳಾದ ಆನಂದ ಕುಲಕರ್ಣಿ, ಪ್ರಾಂಶುಪಾಲ ಎಸ್.ಜಿ. ಗುಳಗಣ್ಣವರ ಶಾಲೆ ಸುತ್ತಲೂ ಕಾಂಪೌಂಡ್ ನಿರ್ಮಾಣ ಹಾಗೂ ಅಗತ್ಯ ಸೌಕರ್ಯ ಒದಗಿಸಲು ಮನವಿ ಸಲ್ಲಿಸಿದರು. ಈ ಕುರಿತು ಸಿಇಒ ಭರತ್ ಎಸ್ ಅವರು ಪಿಯು ಕಾಲೇಜು ಶೌಚಾಲಯ ನಿರ್ಮಾಣಕ್ಕೆ ಅನುದಾನ ಬಿಡುಗಡೆಯಾಗಿದೆ. ಇನ್ನುಳಿದ ಸೌಲಭ್ಯಗಳು ಜಿಲ್ಲಾ ಪಂಚಾಯಿತಿ ವ್ಯಾಪ್ತಿಗೆ ಒಳಪಡುವುದಿಲ್ಲ. ಸಂಬಂಧಪಟ್ಟ ಇಲಾಖೆಯ ಗಮನಕ್ಕೆ ತರಲಾಗುವುದು ಎಂದು ತಿಳಿಸಿದರು.

ಕಲಿಕೆಯಲ್ಲಿ ಹಿಂದುಳಿದ ವಿದ್ಯಾರ್ಥಿಗಳಿಗೆ ವಿಶೇಷ ತರಗತಿ, ವೈಯಕ್ತಿಕ ಕಾಳಜಿ ಮಾಡುವ ಮೂಲಕ ಮುಂಬರುವ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ ಸಾಧಿಸಬೇಕು ಎಂದು ಸಿಇಒ ಭರತ್ ಎಸ್ ಸೂಚನೆ ನೀಡಿದರು.

ಗಜೇಂದ್ರಗಡ ಕಾರ್ಯನಿರ್ವಾಹಕ ಅಧಿಕಾರಿ ಮಂಜುಳಾ ಹಕಾರಿ, ಸಹಾಯ ನಿರ್ದೇಶಕ ಬಸವರಾಜ ಬಡಿಗೇರ, ರೋಣ ಕ್ಷೇತ್ರ ಶಿಕ್ಷಣಾಧಿಕಾರಿ ಫಣಿಬಂದ, ಮುಖ್ಯ ಶಿಕ್ಷಕ ಎಸ್.ಬಿ. ನಿಡಗುಂದಿ, ತಾಲೂಕು ದೈಹಿಕ ಶಿಕ್ಷಣಾಧಿಕಾರಿ ಆರ್.ಎಸ್. ನರೇಗಲ್ಲ ಇದ್ದರು.

### ಗದಗ-ಬೆಟಗೇರಿ ಇನ್ನರ್‌ವ್ಹೀಲ್ ಕ್ಲಬ್‌ನಿಂದ ಶಾಲಾ ದತ್ತು ಕಾರ್ಯಕ್ರಮ

# ಸರ್ಕಾರಿ ಶಾಲೆಗಳ ಮಕ್ಕಳು ಬದುಕನ್ನು ಅರಿತವರು

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರಿ ಶಾಲೆಗಳಲ್ಲಿ ಶಿಕ್ಷಣ ಪಡೆದ ಮಕ್ಕಳು ಬದುಕನ್ನು ಅರಿತವರು. ಇಂತಹ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗಾಗಿ ಸರ್ಕಾರದ ಉಚಿತ ಯೋಜನೆಗಳು ಅನುಷ್ಠಾನಗೊಂಡಿದ್ದು, ಇವುಗಳೊಂದಿಗೆ ಸಂಘ-ಸಂಸ್ಥೆಗಳು ಕೈಜೋಡಿಸಿ ಮಕ್ಕಳ ಉತ್ತಮ ಭವಿಷ್ಯಕ್ಕೆ ಸಹಕರಿಸುತ್ತಿರುವುದು ಹೆಮ್ಮೆಯ ಸಂಗತಿ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ವಿ. ಶೆಟ್ಟೆಪ್ಪನವರ ಹೇಳಿದರು.

ಅವರು ಮಂಗಳವಾರ ಗದುಗಿನ ಸರ್ಕಾರಿ ಪ್ರಾಥಮಿಕ ಹೆಣ್ಣುಮಕ್ಕಳ ಶಾಲೆ ನಂ.2ರಲ್ಲಿ ಇನ್ನರ್‌ವ್ಹೀಲ್ ಕ್ಲಬ್ ಗದಗ-ಬೆಟಗೇರಿ ವತಿಯಿಂದ 2025-2026ನೇ ಸಾಲಿಗೆ ಗದಗ ಶಹರದ ಸರ್ಕಾರಿ ಶಾಲೆಗಳ ದತ್ತು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಗದಗ-ಬೆಟಗೇರಿ ಇನ್ನರ್‌ವ್ಹೀಲ್ ಕ್ಲಬ್ ಸಾಮಾಜಿಕವಾಗಿ ಮತ್ತು ಶೈಕ್ಷಣಿಕವಾಗಿ ಹಲವಾರು ರಚನಾತ್ಮಕ ಕಾರ್ಯಗಳನ್ನು ಹಮ್ಮಿಕೊಂಡು ಯಶಸ್ವಿಯಾಗಿದ್ದು, ಬಡ ಹಾಗೂ ಪ್ರತಿಭಾನ್ವಿತ ಮಕ್ಕಳನ್ನು ದತ್ತು ಪಡೆದು ಅವರ ಶೈಕ್ಷಣಿಕ ಅಭಿವೃದ್ಧಿಗೆ ಕೈಜೋಡಿಸುತ್ತಿರುವುದು ಅಭಿನಂದನೀಯ ಎಂದರು.


ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಸಂಪನ್ಮೂಲ ವ್ಯಕ್ತಿ ಮೊಹಮ್ಮದ್‌ಶಫಿ ಯರಗುಡಿ ಮಾತನಾಡಿ, ಇಂದಿನ ವಿದ್ಯಾರ್ಥಿಗಳಿಗೆ ಮೌಲ್ಯ ಶಿಕ್ಷಣದ ಅವಶ್ಯಕತೆಯಿದ್ದು, ವಿದ್ಯಾರ್ಥಿಗಳು ನ್ಯಾಯ, ನೀತಿ, ಮಾನವೀಯತೆ, ಆದರ್ಶ, ಸಹಕಾರ ಮನೋಭಾವನೆಗಳನ್ನು ಹೊಂದುವಲ್ಲಿ ಶಿಕ್ಷಣ ಇಲಾಖೆಯೊಂದಿಗೆ ಸಂಘ-ಸಂಸ್ಥೆಗಳು ಜೊತೆಗೂಡಿ ಮಕ್ಕಳಿಗೆ ಮೌಲ್ಯ ಶಿಕ್ಷಣವನ್ನು ನೀಡಬೇಕಿದೆ ಎಂದರು.

ಪ್ರಾಸ್ತಾವಿಕವಾಗಿ ಸಂಪನ್ಮೂಲ ವ್ಯಕ್ತಿ ಕವಿತಾ ಬೇಲೇರಿ ಮಾತನಾಡಿ, ಸರ್ಕಾರಿ ಶಾಲೆಗಳ ಫಲಿತಾಂಶ, ವಿದ್ಯಾರ್ಥಿಗಳ ಶೈಕ್ಷಣಿಕ ಗುಣಮಟ್ಟ, ಗುಣಾತ್ಮಕ ಶಿಕ್ಷಣ, ಫಲಪ್ರದವಾದ ಕಲಿಕೆ ಏರಿಕೆಯಾಗಿದ್ದು, ಇಲಾಖೆಯೊಂದಿಗೆ ಸಂಘ-ಸಂಸ್ಥೆಗಳು ಕೈಜೋಡಿಸಿ ಸರ್ಕಾರಿ ಶಾಲೆಗಳ ಸಬಲೀಕರಣಕ್ಕೆ ಮುಂದಾಗಬೇಕೆಂದರು.

ಅಧ್ಯಕ್ಷತೆ ವಹಿಸಿದ್ದ ಶಾಲಾ ಮುಖ್ಯೋಪಾಧ್ಯಾಯೆ ಎಫ್.ಜೆ. ದಲಭಂಜನ ಮಾತನಾಡಿ, ಮಕ್ಕಳ ಗುಣಮಟ್ಟದ ಕಲಿಕೆ, ಶೈಕ್ಷಣಿಕ ಅಭಿವೃದ್ಧಿಯೇ ನಮ್ಮ ಧ್ಯೇಯವಾಗಿದ್ದು, ದಾನಿಗಳು, ಸಂಘ-ಸಂಸ್ಥೆಗಳು ಸರ್ಕಾರಿ ಶಾಲೆಗಳನ್ನು ಆಯ್ಕೆ ಮಾಡಿಕೊಂಡು ಸಹಾಯ ಮಾಡುತ್ತಿರುವುದು ಹೆಮ್ಮೆಯ ಸಂಗತಿ ಎಂದರು.

ಕ್ಲಬ್‌ನ ಖಜಾಂಚಿ ಪುಷ್ಪಾ ಭಂಡಾರಿ ಪ್ರಾರ್ಥಿಸಿದರು. ಎಡಿಟರ್ ವೀಣಾ ಕಾವೇರಿ ಸ್ವಾಗತಿಸಿದರು. ಎಚ್.ಬಿ. ಬಂಡಿವಡ್ಡರ ನಿರೂಪಿಸಿದರು. ಕೊನೆಯಲ್ಲಿ ಕ್ಲಬ್‌ನ ಸಿ.ಪಿ.ಸಿ.ಸಿ ಮೀನಾಕ್ಷಿ ಕೊರವಣ್ಣವರ ವಂದಿಸಿದರು. ಮಕ್ಕಳಿಗೆ ಚಿತ್ರಕಲಾ ಸ್ಪರ್ಧೆ ಏರ್ಪಡಿಸಿ ವಿಜೇತ ಮಕ್ಕಳಿಗೆ ಬಹುಮಾನ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಶಿಲ್ಪಾ ಅಕ್ಕಿ, ವಿ.ಕೆ. ಪಾಟೀಲ, ವಿದ್ಯಾ ಕಬ್ಬರಗಿ, ಇಂದಿರಾಬಾಯಿ, ಸಿ.ಎಸ್. ನಾಗನೂರ, ಗೌರಮ್ಮ ಉಪಸ್ಥಿತರಿದ್ದರು.




> ಇನ್ನರ್‌ವ್ಹೀಲ್ ಕ್ಲಬ್ ಗದಗ-ಬೆಟಗೇರಿ ಅಧ್ಯಕ್ಷೆ ಅಶ್ವಿನಿ ಜಗತಾಪ ಮಾತನಾಡಿ, ಬೇಟಿ ಬಚಾವೋ-ಬೇಟಿ ಪಡಾವೋ ಎಂಬ ಧ್ಯೇಯದೊಂದಿಗೆ ಹೆಣ್ಣು ಮಗುವಿನ ಶೈಕ್ಷಣಿಕ ಬೆಳವಣಿಗೆಗೆ ಪ್ರೋತ್ಸಾಹ ನೀಡುವುದಕ್ಕಾಗಿ ಈ ಶಾಲೆಯನ್ನು ದತ್ತು ಪಡೆಯಲಾಗಿದೆ. ಮಕ್ಕಳಿಗೆ ವಿವಿಧ ಚಟುವಟಿಕೆ ಹಾಗೂ ಸ್ಪರ್ಧೆಗಳನ್ನು ಏರ್ಪಡಿಸಿ ಬಹುಮಾನ ವಿತರಿಸಲಾಗುವುದು. ಶಾಲೆಯ ಅಗತ್ಯತೆಗಳನ್ನು ಪೂರೈಸಲು ಪ್ರಯತ್ನಿಸಲಾಗುತ್ತಿದೆ ಎಂದರು.

## ಸಂಪಾದಕೀಯ

# ಅನ್ನದಾತರು ಮತ್ತು ದುಡಿಯುವ ಕೈಗಳ ಪರವಾಗಿರಲಿ ಸರಕಾರ

ಜುಲೈ 9 ರಂದು 10 ಪ್ರಮುಖ ಕಾರ್ಮಿಕ ಸಂಘಟನೆಗಳು ಕರೆ ನೀಡಿರುವ ರಾಷ್ಟ್ರವ್ಯಾಪಿ ಮುಷ್ಕರವು ಕೇಂದ್ರ ಸರ್ಕಾರದ ನೀತಿಗಳ ವಿರುದ್ಧದ ಆಕ್ರೋಶದ ಸ್ಪಷ್ಟ ಸಂಕೇತವಾಗಿದೆ.

ನರೇಂದ್ರ ಮೋದಿ ನೇತೃತ್ವದ ಸರ್ಕಾರದ ಕಾರ್ಮಿಕ ವಿರೋಧಿ, ರೈತ ವಿರೋಧಿ ಮತ್ತು ದೇಶ ವಿರೋಧಿ ನೀತಿಗಳು ಹಾಗೂ ಕಾರ್ಪೊರೇಟ್ ಪರ ನಿಲುವುಗಳು ದೇಶದ ದುಡಿಯುವ ವರ್ಗ ಮತ್ತು ಅನ್ನದಾತರ ಬದುಕನ್ನು ಸಂಕಷ್ಟಕ್ಕೆ ದೂಡಿವೆ.

ಹೊಸ ಕಾರ್ಮಿಕ ಸಂಹಿತೆಗಳು ಕಾರ್ಮಿಕರ ಹಕ್ಕುಗಳನ್ನು ಮೊಟಕುಗೊಳಿಸಿ, ಕಾರ್ಪೊರೇಟ್‌ಗಳ ಅಡಿಯಾಳಾಗಿಸುವಂತಿವೆ. ಕನಿಷ್ಠ ವೇತನ, ಸಾಮಾಜಿಕ ಭದ್ರತೆ, ಮತ್ತು ಸಂಘಟಿಸುವ ಹಕ್ಕುಗಳ ಮೇಲೆ ಸರ್ಕಾರದ ಹಸ್ತಕ್ಷೇಪ ಹೆಚ್ಚುತ್ತಿದೆ.

ಇದಲ್ಲದೆ, ಕೃಷಿ ಕಾನೂನುಗಳನ್ನು ರದ್ದುಗೊಳಿಸಿದ್ದರೂ, ರೈತರ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ದೊರೆತಿಲ್ಲ. ಎಂಎಸ್‌ಪಿ (ಕನಿಷ್ಠ ಬೆಂಬಲ ಬೆಲೆ) ಖಾತರಿ, ಸಾಲ ಮನ್ನಾ, ಮತ್ತು ಬೆಳೆ ನಷ್ಟ ಪರಿಹಾರದಂತಹ ಪ್ರಮುಖ ಬೇಡಿಕೆಗಳು ಇನ್ನೂ ಈಡೇರಿಲ್ಲ.

ಸಾರ್ವಜನಿಕ ಉದ್ಯಮಗಳ ಖಾಸಗೀಕರಣವು ದೇಶದ ಆರ್ಥಿಕತೆಗೆ ಬೆನ್ನೆಲುಬಾಗಿರುವ ಕ್ಷೇತ್ರಗಳನ್ನು ಕೆಲವೇ ಕಾರ್ಪೊರೇಟ್‌ಗಳ ಕೈಗೆ ನೀಡುವ ಮೂಲಕ ದೇಶದ ಸಂಪತ್ತನ್ನು ಕೇಂದ್ರೀಕರಿಸುತ್ತಿದೆ. ಇದು ಉದ್ಯೋಗ ನಷ್ಟಕ್ಕೆ ಕಾರಣವಾಗುವುದಲ್ಲದೆ, ಸಾಮಾನ್ಯ ಜನರ ಸೇವೆಗಳ ಮೇಲೆ ನಕಾರಾತ್ಮಕ ಪರಿಣಾಮ ಬೀರುತ್ತದೆ.

ಈ ಮುಷ್ಕರ ಕೇವಲ ಕಾರ್ಮಿಕ ಸಂಘಟನೆಗಳ ಹೋರಾಟವಲ್ಲ, ಬದಲಾಗಿ ದೇಶದ ಪ್ರತಿಯೊಬ್ಬ ಪ್ರಜೆಯ ಭವಿಷ್ಯದ ಪ್ರಶ್ನೆಯಾಗಿದೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಜನರ ಧ್ವನಿಯನ್ನು ಆಲಿಸುವುದು ಅತ್ಯಗತ್ಯ. ಸರ್ಕಾರ ತನ್ನ ನೀತಿಗಳನ್ನು ಮರುಪರಿಶೀಲಿಸಿ, ಜನರ ಹಿತಾಸಕ್ತಿಗಳನ್ನು ರಕ್ಷಿಸಲು ಮುಂದಾಗಬೇಕು.

## ಡಾ. ಮಲ್ಲಿಕಾರ್ಜುನ ಕುಂಬಾರರ 'ಕಾಲಿಗೆ ಗಾಲಿ ಕಟ್ಟಿಕೊಂಡು' ಗ್ರಂಥ ಬಿಡುಗಡೆ

# ಪ್ರವಾಸದಿಂದ ಜ್ಞಾನ ದಿಗಂತದ ವಿಸ್ತರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ಕನ್ನಡದ ಪ್ರವಾಸ ಸಾಹಿತ್ಯಕ್ಕೆ ತನ್ನದೇ ಆದ ಇತಿಹಾಸವಿದೆ. ದೇಶ ಸುತ್ತು-ಕೋಶ ಓದು ಎನ್ನುವಂತೆ ದೇಶ ತಿರುಗುವುದರಿಂದ ಪ್ರವಾಸದಲ್ಲಿ ಹೊಸ ಹೊಸ ಅನುಭವಗಳು ಆಗುವವು. ಅಂತಹ ಅನುಭವಗಳ ಪ್ರವಾಸ ಕಥನಗಳು ಓದುಗರಿಗೆ ಸಾಕ್ಷಾತ್ ಪ್ರವಾಸ ಮಾಡಿದ ಅನುಭವ ನೀಡುವಂತಹ ಸಾಹಿತ್ಯವಾಗಿದೆ ಎಂದು ಗದಗ-ಬೆಟಗೇರಿ ನಗರಸಭೆಯ ಪೌರಾಯುಕ್ತ ರಾಜಾರಾಮ ಪವಾರ ಹೇಳಿದರು.




ಅವರು ನಗರದ ಗದಗ ರೆಸ್ಟೋರೆಂಟ್ ಸಭಾಂಗಣದಲ್ಲಿ ಗೆಳೆಯರ ಬಳಗ ಏರ್ಪಡಿಸಿದ್ದ ಹಿರಿಯ ಸಾಹಿತಿ, ನಿವೃತ್ತ ಪತ್ರಕರ್ತ ಡಾ. ಮಲ್ಲಿಕಾರ್ಜುನ ಕುಂಬಾರ ಅವರ 'ಕಾಲಿಗೆ ಗಾಲಿ ಕಟ್ಟಿಕೊಂಡು' ಪ್ರವಾಸ ಕಥನಗಳ ಪುಸ್ತಕವನ್ನು ಲೋಕಾರ್ಪಣೆಗೊಳಿಸಿ ಮಾತನಾಡಿದರು.

ಪ್ರವಾಸ ಪ್ರಯಾಸ ಆದರೂ ಪ್ರವಾಸಿಗನಿಗೆ ಜ್ಞಾನದ ದಿಗಂತ ಹೆಚ್ಚುವದು. ಪ್ರವಾಸಿ ತಾಣ, ಪ್ರದೇಶ, ಜನಾಂಗ, ಭಾಷೆ, ಆಹಾರ-ವಿಹಾರ ಎಲ್ಲವೂ ಹೊಸ ಹೊಸ ಅನುಭವ ನೀಡಬಲ್ಲವು. ಅಂತಹ ಅನುಭವಗಳನ್ನು ಪಡೆದುಕೊಂಡ ಹಿರಿಯ ಸಾಹಿತಿ ಪ್ರವಾಸ ಕಥನ ಪ್ರಪಂಚಕ್ಕೆ ಹೊಸ ಕೊಡುಗೆ ನೀಡಿದ್ದಾರೆ ಎಂದರು.

ಸಾಹಿತಿಗಳಾದ ಶಿವನಗೌಡ ಗೌಡರ, ಐ.ಕೆ. ಕಮ್ಮಾರ ಅವರು ಡಾ.ಮಲ್ಲಿಕಾರ್ಜುನ ಕುಂಬಾರ ಅವರ ಸಾಹಿತ್ಯಿಕ ಕೃತಿಗಳ ಬಗ್ಗೆ, ಉಪನ್ಯಾಸಕರಾಗಿ, ಪತ್ರಕರ್ತರಾಗಿಯೂ ಸಲ್ಲಿಸಿದ ಸೇವೆಯನ್ನು ಅಭಿನಂದಿಸಿದರು. ಶಶಿಧರ ಮಂಗಳೂರು ವೇದಿಕೆ ಮೇಲೆ ಉಪಸ್ಥಿತರಿದ್ದರು.

ಸಮಾರಂಭದಲ್ಲಿ ಪ್ರೇಕ್ಷರಾಗಿ ಪಾಲ್ಗೊಂಡಿದ್ದ ರೋಣ ಗುಲಗಂಜಿಮಠದ ಪೂಜ್ಯ ಗುರುಪಾದದೇವರು, ಕನ್ನಡ ವಿಶ್ವವಿದ್ಯಾಲಯದ ವಿಶ್ರಾಂತ ಪ್ರಾಧ್ಯಾಪಕ ಡಾ. ಕೆ. ರವೀಂದ್ರನಾಥ ಮಾತನಾಡಿ, ಸರಳ ವ್ಯಕ್ತಿತ್ವದ ಕುಂಬಾರರು ಕನ್ನಡ ಸಾಹಿತ್ಯಕ್ಕೆ ವೈವಿಧ್ಯಮಯವಾದ ಸಾಹಿತ್ಯಿಕ ಕೃತಿಗಳನ್ನು ನೀಡಿದ್ದಾರೆಂದು ಬಣ್ಣಿಸಿದರು. ಡಾ. ಕುಂಬಾರ ಅವರನ್ನು ರೋಣ ಗುಲಗಂಜಿಮಠದ ಪೂಜ್ಯ ಗುರುಪಾದದೇವರು, ಗೆಳೆಯರ ಬಳಗ, ಗದಗ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನಿಂದ ಸನ್ಮಾನಿಸಿ ಗೌರವಿಸಲಾಯಿತು.

ಅಧ್ಯಕ್ಷತೆ ವಹಿಸಿದ್ದ ಗದಗ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ನೂರು ವರ್ಷಗಳ ಹಿಂದೆ ಪ್ರವಾಸ ಸಾಹಿತ್ಯದ ಕೊರತೆ ಇತ್ತು. ಪ್ರವಾಸ ಎಂದರೆ ಅದೊಂದು ತೀರ್ಥಯಾತ್ರೆ ಎಂಬ ಭಾವನೆ ಇತ್ತು. ಪ್ರಾಚ್ಯ ಪ್ರಜ್ಞೆ ಬೆಳೆದಂತೆ, ಐತಿಹಾಸಿಕ ಮತ್ತು ಸಾಂಸ್ಕೃತಿಕ ಪ್ರಜ್ಞೆ ಜಾಗೃತಗೊಂಡಂತೆ ಪ್ರವಾಸಕ್ಕೆ ಮತ್ತು ಪ್ರವಾಸ ಕಥನ ಸಾಹಿತ್ಯದ ಮಹತ್ವ ಹೆಚ್ಚುತ್ತ ಬಂತು ಎಂದರು.

ಪ್ರಯಾಸದ ಪ್ರವಾಸ ಹೆಚ್ಚು ಅನುಕೂಲತೆ ಸೌಲಭ್ಯಗಳಿಂದಾಗಿ ಉಲ್ಲಾಸದ ಪ್ರವಾಸವಾಗಿ ಮಾರ್ಪಡುತ್ತ ಬಂದು, ಇಂದು ಪ್ರವಾಸ ಒಂದು ಉದ್ಯಮವಾಗಿ ಬೆಳೆದು ಬಂದಿದೆ. ದೇಶದ ಹಲವಾರು ರಾಜ್ಯಗಳ ಪ್ರವಾಸ ಮಾಡಿರುವ ಸಾಹಿತಿ ಡಾ. ಕುಂಬಾರ ಅವರು ತಾವು ಕೈಗೊಂಡ ಪ್ರವಾಸದ ಸಾರವನ್ನು ಕಥನವಾಗಿಸಿ ಪ್ರಕಟಿಸಿದ ಈ ಗ್ರಂಥ ಮೌಲಿಕ ಗ್ರಂಥವಾಗಿದೆ ಎಂದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಡಾ. ಕುಂಬಾರ, ಪ್ರವಾಸದಿಂದ ನನಗೆ ಆತ್ಮತೃಪ್ತಿ ದೊರೆತಿದೆ. ಪ್ರವಾಸ ಕಥನಗಳ ಈ ಗ್ರಂಥವನ್ನು ಪ್ರಕಟಿಸಿ ನನಗೆ ಸಂತೃಪ್ತಿ ದೊರೆತಿದೆ. ಬರಲಿರುವ ದಿನಗಳಲ್ಲಿ ಅಧ್ಯಯನ, ಬರವಣಿಗೆ ಮುಂದುವರೆಸುವದಾಗಿ ಹೇಳಿದರು.

ಶಿವಾನಂದ ಮಠದ ಸ್ವಾಗತಿಸಿದರು ಕೆ.ಸಿ. ಲಮಾಣಿ ಪರಿಚಯಿಸಿದರು. ಎಸ್.ಬಿ. ಮಾಮನಿ ನಿರೂಪಿಸಿದರು, ಬಸವರಾಜ ದಂಡಿನ ಕೃತಿ ಪರಿಚಯಿಸಿದರು. ಕೊನೆಗೆ ಪಿ.ಎನ್. ರಾಠೋಡ ವಂದಿಸಿದರು.

ಸಮಾರಂಭದಲ್ಲಿ ಪ್ರಾಚ್ಯ ವಸ್ತು ಸಂಶೋಧಕ ಅ.ದ. ಕಟ್ಟಿಮನಿ, ಡಾ. ರಾಜಶೇಖರ ದಾನರಡ್ಡಿ, ವೈ.ಜಿ. ಪಾಟೀಲ, ಹುಲ್ಲಪ್ಪ ಅರಗಂಜಿ, ಕಲ್ಲಯ್ಯ ಹಿರೇಮಠ, ಅಂದಾನೆಪ್ಪ ವಿಭೂತಿ, ಬಸವರಾಜ ಬಂಡಿವಾಡ, ಪ್ರೊ. ಕಿಶೋರಬಾಬು ನಾಗರಕಟ್ಟಿ, ಬಸವರಾಜ ವಾರಿ, ಬಸವರಾಜ ಕರಮುಡಿ ಮುಂತಾದವರು ಪಾಲ್ಗೊಂಡಿದ್ದರು.

## ಉತ್ತರಪ್ರದೇಶ| ಮೊಹರಂ ಮೆರವಣಿಗೆಯ ವೇಳೆ ಕಲ್ಲು ತೂರಾಟ; 8 ವರ್ಷದ ಬಾಲಕನಿಗೆ ಗಾಯ

■ ವಿಜಯಸಾಕ್ಷಿ ಸುದ್ದಿ, ಉತ್ತರಪ್ರದೇಶ

ಜುಲೈ 7 ರ ಭಾನುವಾರ ಉತ್ತರಪ್ರದೇಶದ ಕುಶಿನಗರ ಜಿಲ್ಲೆಯ ಕೆಲವು ಭಾಗಗಳಲ್ಲಿ ಮೊಹರಂ ಮೆರವಣಿಗೆ ಕಲ್ಲು ತೂರಾಟದ ಘಟನೆ ವರದಿಯಾಗಿದ್ದು, ಎಂಟು ವರ್ಷದ ಬಾಲಕ ಗಾಯಗೊಂಡಿದ್ದಾನೆ.

ಟೆಕುತಾರ್ ಮಾರುಕಟ್ಟೆಯಲ್ಲಿ, ಮೆರವಣಿಗೆಯ ಸಮಯದಲ್ಲಿ ಡಿಜೆ ಸಂಗೀತದ ವಿವಾದವು ಎರಡು ಸಮುದಾಯಗಳ ಸದಸ್ಯರ ನಡುವೆ ಕಲ್ಲು ತೂರಾಟಕ್ಕೆ ಕಾರಣವಾಯಿತು. ಅವ್ಯವಸ್ಥೆಯ ನಡುವೆ, ಎಂಟು ವರ್ಷದ ಬಾಲಕ ಅಖ್ಲಾಕ್ ತಲೆಗೆ ಗಾಯವಾಗಿದೆ.



# ಭಾವೈಕ್ಯತೆಯ ಮೊಹರಂ ಆಚರಣೆ

■ ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಭಾವೈಕ್ಯತೆ ಸಾರುವ ಮೊಹರಂ ಹಬ್ಬವನ್ನು ತಾಲೂಕಿನ ಬಾಗಳಿ ಗ್ರಾಮದಲ್ಲಿ ಅದ್ದೂರಿಯಾಗಿ ಆಚರಿಸಲಾಯಿತು.

ಗ್ರಾಮದ ಫಕ್ಕೀರಸ್ವಾಮಿ ದೇವಸ್ಥಾನದಲ್ಲಿ ಪೀರಲ ದೇವರನ್ನು ಪ್ರತಿಷ್ಠಾಪಸಿಲಾಗಿತ್ತು. ಪೀರಲು ದೇವರು ಪ್ರತಿಷ್ಠಾಪಿಸಿರುವ ಕಟ್ಟೆಯ ಮುಂದೆ ಅಲಾಯಿ ಕುಣಿಯಲ್ಲಿ ನಿಗಿ ನಿಗಿ ಕೆಂಡ ಹಚ್ಚಿ ಯುವಕರು ಹರಕೆ ತೀರಿಸಿದರು.

ಮಹಿಳೆಯರು, ಮಕ್ಕಳು ಶ್ರದ್ಧಾ-ಭಕ್ತಿಯಿಂದ ಸಕ್ಕರೆ, ಬೆಲ್ಲದ ನೈವೇದ್ಯ ಅರ್ಪಿಸಿ, ಭಾನುವಾರ ಸಂಜೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಪೀರಲ ಮೂರ್ತಿಗಳ ಮೆರವಣಿಗೆಯ ಮೂಲಕ ವಿಸರ್ಜನೆ ಮಾಡಲಾಯಿತು.

ಸಣ್ಣ ಹನುಮಂತಪ್ಪ, ರಾಮಣ್ಣ, ಗಂಟಿ ಮಂಜುನಾಥ, ಮುಜಾವರ್ ನಜೀರ್ ಸಾಬ್, ಖಾನ್ ಸಾಬ್, ಮುಲ್ಲಪ್ಪ, ಅಲ್ಲಾಭಕ್ಷಿ, ಶಬ್ಬೀರ್ ಸಾಬ್, ವಜೀರ್ ಸಾಬ್, ಹುಸೇನ್ ಸಾಬ್, ಇಮಾಮ್ ಸಾಬ್ ಹಾಗೂ ಇತರರಿದ್ದರು.

## ಬ್ರಹ್ಮವೃಂದದ ವಾರ್ಷಿಕ ಸರ್ವಸಾಧಾರಣ ಸಭೆಯಲ್ಲಿ ವಿ.ಎಲ್. ಪೂಜಾರ ಕರೆ

# ಸಮಾಜದ ಬೆಳವಣಿಗೆಯಲ್ಲಿ ಸಹಕರಿಸಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಯಾವುದೇ ಸಮಾಜವಿರಲಿ, ಅದಕ್ಕೆ ತನ್ನದೆ ಆದ ಸಂಸ್ಕೃತಿ, ಸಂಸ್ಕಾರ, ಸಂಪ್ರದಾಯಗಳಿರುತ್ತವೆ. ಪ್ರತಿಯೊಂದು ಸಮಾಜದ ಬೆಳವಣಿಗೆಯಲ್ಲಿ ಪ್ರತಿಯೊಬ್ಬರ ಪಾತ್ರ ಮುಖ್ಯವಾಗಿರುತ್ತದೆ. ಇದರಲ್ಲಿ ಎಲ್ಲರ ಸಹಕಾರ ಅವಶ್ಯ ಎಂದು ಬ್ರಾಹ್ಮಣ ಸಮಾಜದ ಹಿರಿಯ ಮುಖಂಡ ಹಾಗೂ ಶಂಕರಸೇವಾ ಸಮಿತಿ ಅಧ್ಯಕ್ಷ ವಿ.ಎಲ್. ಪೂಜಾರ ಅಭಿಪ್ರಾಯಪಟ್ಟರು.



ಅವರು ರವಿವಾರ ಪಟ್ಟಣದ ಶ್ರೀ ಶಂಕರಭಾರತಿಮಠದಲ್ಲಿ ಬ್ರಹ್ಮವೃಂದದ ವಾರ್ಷಿಕ ಸರ್ವಸಾಧಾರಣ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಪಟ್ಟಣದಲ್ಲಿ ಬ್ರಾಹ್ಮಣ ಸಮಾಜದ ವತಿಯಿಂದ 70-80 ವರ್ಷಗಳ ಹಿಂದೆ ಬ್ರಹ್ಮವೃಂದವನ್ನು ಅಂದಿನ ಹಿರಿಯರು ಕಟ್ಟಿ ತನ್ಮೂಲಕ ಅನೇಕ ಕಾರ್ಯಕ್ರಮಗಳನ್ನು ಮಾಡುತ್ತಾ ಬರಲಾಗುತ್ತಿದೆ. ಅಲ್ಲದೆ ಶಂಕರಭಾರತಿ ಮಠದ ಸಮುದಾಯಭವನವನ್ನು ಸಹ ನಿರ್ಮಿಸಿದ್ದು, ಇಂದು ಸಂಘ ಆರ್ಥಿಕವಾಗಿ ಸಮಾಜಕ್ಕೆ ಹೊರೆಯಾಗದಂತೆ ಬೆಳೆಯುತ್ತಿರುವದು ಹೆಮ್ಮೆಯ ವಿಷಯವಾಗಿದೆ. ಸಣ್ಣ ಸಮಾಜವೆಂದು ನಮ್ಮಲ್ಲಿ ಕೀಳುರಿಮೆ ಬೇಡ, ಉತ್ತಮ ಕಾರ್ಯಕ್ರಮಗಳನ್ನು ಮಾಡುತ್ತಾ ಸಮಾಜ ಬಾಂಧವರು ಸೇರಿ ಹೆಚ್ಚು ಹೆಚ್ಚು ಸಂಘಟಿತರಾಗೋಣ ಎಂದರು.

ಬ್ರಹ್ಮವೃಂದದ ಅಧ್ಯಕ್ಷ ಗೋಪಾಲ ಪಡ್ನೀಸ್, ತಾಲೂಕಾ ಬ್ರಾಹ್ಮಣ ಸಂಘದ ಅಧ್ಯಕ್ಷ ಕೃಷ್ಣ ಕುಲಕರ್ಣಿ ಮಾತನಾಡಿ, ಸಮಾಜದಲ್ಲಿ ಪ್ರತಿಯೊಬ್ಬರೂ ತಮ್ಮ ತಮ್ಮ ಸೇವೆಯನ್ನು ಸಲ್ಲಿಸುತ್ತಾ ಬರುತ್ತಿದ್ದಾರೆ. ತಾಲೂಕ, ಜಿಲ್ಲಾ ಹಾಗೂ ಸ್ಥಳೀಯವಾಗಿ ನಡೆಯುವ ಸಮಾಜದ ಸಭೆ-ಸಮಾರಂಭಗಳಲ್ಲಿ ಎಲ್ಲರೂ ಸಕ್ರಿಯವಾಗಿ ಪಾಲ್ಗೊಳ್ಳುವಂತಾಗಬೇಕು. ಪ್ರತಿವರ್ಷದಂತೆ ಈ ವರ್ಷವು ಸಹ ಬ್ರಹ್ಮವೃಂದವು ಯಾವುದೇ ರೀತಿ ಆರ್ಥಿಕ ಸಮಸ್ಯೆ ಇಲ್ಲದೆ ಸಾಗುತ್ತಿರುವದಕ್ಕೆ ಎಲ್ಲರ ಸಹಕಾರ ಕಾರಣವಾಗಿದ್ದು, ಶ್ರೀ ಶಂಕರಭಾರತಿ ಮಠದ ಸಮುದಾಯಭವನಕ್ಕೆ ಇದೀಗ ಸಾಕಷ್ಟು ಅನೂಕೂಲತೆಗಳನ್ನು ಮಾಡಲಾಗಿದೆ ಎಂದು ಹೇಳಿದರು.

ಕಾರ್ಯದರ್ಶಿ ಅರವಿಂದ ದೇಶಪಾಂಡೆ ಮತ್ತು ಖಜಾಂಚಿ ಎಸ್.ಜಿ. ಹೊಂಬಳ ವಾರ್ಷಿಕ ಲೆಕ್ಕ ಪತ್ರ ಮಂಡಿಸಿದರು. ಸಭೆಯಲ್ಲಿ ಆರ್.ಎಚ್. ಕುಲಕರ್ಣಿ, ಕೆ.ಎಸ್. ಕುಲಕರ್ಣಿ, ವಿ.ಆರ್. ಗುಡಿ, ನಾರಾಯಣಭಟ್ ಪುರಾಣಿಕ, ಧೃವ ಬೆಟಗೇರಿ, ಎ.ಪಿ. ಕುಲಕರ್ಣಿ, ಡಿ.ಎಂ. ಪೂಜಾರ, ರಾಜಣ್ಣ ರಾಯಚೂರ, ಮೀನಾಕ್ಷಿ ಸರದೇಶಪಾಂಡೆ, ಅನುಜಾ ಪೂಜಾರ ಸೇರಿದಂತೆ ಅನೇಕರಿದ್ದರು.

# ಬಾಕಿ ವೇತನವನ್ನು ತುರ್ತಾಗಿ ಬಿಡುಗಡೆ ಮಾಡಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ವಿವಿಧ ಸ್ಥರ ಮತ್ತು ಹುದ್ದೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗೆ ಕಳೆದ 6 ತಿಂಗಳಿನಿಂದ ಬಾಕಿ ಇರುವ ವೇತನವನ್ನು ತುರ್ತಾಗಿ ಪಾವತಿಸುವುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಆಗ್ರಹಿಸಿ ಸೋಮವಾರ ತಾ.ಪಂ ಕಚೇರಿಯ ಆವರಣದಲ್ಲಿ ರಾಜ್ಯ ನರೇಗಾ ನೌಕರರ ಕ್ಷೇಮಾಭಿವೃದ್ಧಿ ಸಂಘದವರು ಕಪ್ಪು ಪಟ್ಟಿ ಕಟ್ಟಿಕೊಂಡು ಶಾಂತಿಯುತ ಅಸಹಕಾರ ಪ್ರತಿಭಟನೆ ಪ್ರಾರಂಭಿಸಿದರು.

ಈ ಸಂದರ್ಭದಲ್ಲಿ ಹೋರಾಟಗಾರರಿಗೆ ನೈತಿಕ ಬೆಂಬಲ ನೀಡಿ ಮಾತನಾಡಿದ ತಾಲೂಕು ಯೋಜನಾಧಿಕಾರಿ ಶಿವಕುಮಾರ ವಾಲಿ ಮತ್ತು ಲೆಕ್ಕ ಸಹಾಯಕ ಶ್ರೀಕಾಂತ ಬಾಲೆಹೊಸೂರ, ಸಾವಿರಾರು ಯೋಜನಾ ಫಲಾನುಭವಿಗಳ ಜೀವನೋಪಾಯಕ್ಕಾಗಿ ಆಡಳಿತಾತ್ಮಕ ದಕ್ಷತೆಯನ್ನು ಕಾಪಾಡಿಕೊಳ್ಳಲು ಬಾಕಿ ಇರುವ ವೇತನ, ಸಾಮಗ್ರಿ ಮತ್ತು ಆಡಳಿತಾತ್ಮಕ ನಿಧಿಗಳನ್ನು ತಕ್ಷಣ ಬಿಡುಗಡೆ ಮಾಡುವಂತೆ ಕೋರಿದರು.

ಟಿ.ಎ.ಇ ಫಕ್ಕೀರೇಶ ನಿಟ್ಟಾಲಿ ಮಾತನಾಡಿ, ಗ್ರಾಮಾಭಿವೃದ್ಧಿಯಲ್ಲಿ ನರೇಗಾ ಪಾತ್ರ ದೊಡ್ಡದಿದೆ. ಅದನ್ನು ಸಮರ್ಥವಾಗಿ ನಾವೆಲ್ಲ ಮುಟ್ಟಿಸುತ್ತಿದ್ದೇವೆ. ಆದರೆ ನಮಗೆ ಉದ್ಯೋಗ ಭದ್ರತೆ ಇಲ್ಲದಂತಾಗಿದೆ. ಪ್ರತಿ ತಿಂಗಳು ವೇತನ ದೊರೆಯುತ್ತಿಲ್ಲ. ಕಳೆದ 6 ತಿಂಗಳಿಂದ ಸಂಬಳವಿಲ್ಲದೆ ಕುಟುಂಬ ನಿರ್ವಹಣೆ ಕಷ್ಟವಾಗುತ್ತಿದೆ ಎಂದು ಅಳಲು ತೋಡಿಕೊಂಡರು.

ಈ ಸಂದರ್ಭದಲ್ಲಿ ಟಿ.ಸಿ ಹರೀಶ ಸೊಬರದ, ಟಿಎಂಐಎಸ್ ಮೋಹನ ಹೊಂಬಾಳ, ಮಹಾಂತೇಶ ಪಾಟೀಲ್, ಟಿಎಇ ಫಕ್ಕೀರೇಶ ನಿಟ್ಟಾಲಿ, ಮಂಜುನಾಥ ತಳವಾರ, ಶ್ರೀನಿವಾಸ ಕಲಾಲ್, ಶ್ರೀಧರ ಕುಲಕರ್ಣಿ, ಬಿ.ಕೆ. ಕರಕನಗೌಡ್ರು, ಹುಲಗಪ್ಪ, ಸತೀಶ ಅರಿಷಿನದ, ಕಾಶೀಮಸಾಬ ನದಾಫ್, ತಿರಕಪ್ಪ, ಶಿಲ್ಪಾ ಲಮಾಣಿ, ಗಂಗಮ್ಮ, ಬಾರತಿ, ಗೌರಮ್ಮ ಮಂಜುಳಾ, ಶಿವಮ್ಮ, ವಿನೋದ, ಪರಮೇಶ, ಭೀಮೇಶ ಇದ್ದರು.

# ಮಾಧವಿ ಧಾರವಾಡಕರ್‌ಗೆ ಸನ್ಮಾನ



■ ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ಇಲ್ಲಿನ ಮಂಜುನಾಥ ನಗರದ ಕಣವಿ ಫ್ಲಾಟ್‌ನ ಮಾಧವಿ ಧಾರವಾಡಕರ್ ಸಿಎ ಪರೀಕ್ಷೆಯಲ್ಲಿ ಉತ್ತೀರ್ಣರಾದ ನಿಮಿತ್ತ ಶೀತಲಾಮಾತಾ ಪೂಜಾ/ಸೇವಾ ಟ್ರಸ್ಟ್ ಮತ್ತು ಶ್ರೀ ಹನುಮಂತ್ ಸಿಂಗ್ ಜಮಾದಾರ್ ಸೇವಾ ಟ್ರಸ್ಟ್ ವತಿಯಿಂದ ಸನ್ಮಾನಿಸಲಾಯಿತು.

ಪ್ರಥಮ ಪ್ರಯತ್ನದಲ್ಲಿಯೇ ಮಾಧವಿ ಧಾರವಾಡಕರ ಸಿಎ ಪರೀಕ್ಷೆ ಉತ್ತೀರ್ಣರಾಗಿರುವುದು ಹೆಮ್ಮೆಯ ವಿಷಯ. ಮಾಧವಿಯವರು ತಮ್ಮ ವೃತ್ತಿ ಜೀವನದಲ್ಲಿ ಇನ್ನೂ ಹೆಚ್ಚು ಪ್ರಗತಿ ಹೊಂದಲೆಂದು ಟ್ರಸ್ಟ್ ಅಧ್ಯಕ್ಷ ಎಸ್.ಎ. ಜಮಾದಾರ್ ಹಾರೈಸಿದರು.

ಈ ಸಂದರ್ಭದಲ್ಲಿ ರಾಘವೇಂದ್ರ ನಾರಪ್ಪನವರ್, ಅಮೃತ ಧಾರವಾಡಕರ್, ವಜ್ರಬಾಯಿ ಜಮಾದಾರ್, ಪುಷ್ಪಾ ವರ್ಣೇಕರ್, ಲಕ್ಷ್ಮೀ ಕೌಟೇಕರ್, ವೀಣಾ ಧಾರವಾಡಕರ್, ಸುಭದ್ರ ಧಾರವಾಡಕರ್, ಗಂಗೂಬಾಯಿ, ಸುಜಾತ ಕಾಟೆವಾಲ ಮುಂತಾದವರಿದ್ದರು.

# ರಕ್ತದಾನಕ್ಕೆ ಮಿಗಿಲಾದ ದಾನವಿಲ್ಲ

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಪಂಡಿತ ಪಂಚಾಕ್ಷರ ಗವಾಯಿಗಳವರ ಶಿಕ್ಷಣ ಮಹಾವಿದ್ಯಾಲಯದಲ್ಲಿ ಪರಮ ಪೂಜ್ಯ ಡಾ. ಕಲ್ಲಯ್ಯಜ್ಜನವರ 55ನೇ ಜನ್ಮದಿನದ ಕಾರ್ಯಕ್ರಮ ಹಾಗೂ ಉಚಿತ ರಕ್ತ ಪರೀಕ್ಷೆ, ರಕ್ತದ ಗುಂಪು ವರ್ಗೀಕರಣ, ಎಚ್.ಬಿ ಪರೀಕ್ಷಾ ಶಿಬಿರವನ್ನು ಏರ್ಪಡಿಸಲಾಗಿತ್ತು.



ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಪೂಜ್ಯ ಡಾ. ಕಲ್ಲಯ್ಯಜ್ಜನವರು ವಹಿಸಿ ಮಾತನಾಡಿ, ರಕ್ತದಾನ ಶ್ರೇಷ್ಠ ದಾನವಾಗಿದೆ. ಲಕ್ಷಾಂತರ ಜೀವಗಳನ್ನು ಉಳಿಸಲು ರಕ್ತ ಅತ್ಯಗತ್ಯ. ರಕ್ತವನ್ನು ಉತ್ಪಾದಿಸಲು ಸಾಧ್ಯವಿಲ್ಲ. ಅದನ್ನು ದಾನಿಗಳು, ಆರೋಗ್ಯವಂತರು, ಯುವಕರು, ದಾನ ಮಾಡುವುದರಿಂದ ಮಾತ್ರ ಅದನ್ನು ಸಂಗ್ರಹಿಸಿ ಅಗತ್ಯವಿರುವವರಿಗೆ ನೀಡಲು ಸಾಧ್ಯಾವಾಗುತ್ತದೆ. ಶ್ರೀ ಬವಸಾರ್ ವಿಷನ್ ಇಂಡಿಯಾ ಗದಗನ ಡಾ. ದತ್ತು ವೈಕುಂಟೆಯವರ ಸೇವೆ ಅನನ್ಯವಾದದು. ಅವರ ನಿಸ್ವಾರ್ಥ ಸೇವೆಯನ್ನು ಸಮಾಜ ಗುರುತಿಸಿ ಗೌರವಿಸಬೇಕು ಎಂದರು.

ಶ್ರೀ ಮಾತಾ ಮಾಣಿಕೇಶ್ವರಿ ಶಾಖಾ ಮಠದ ಶಿವಶರಣೆ ನಂದೀಶ್ವರಿ ಮಾತಾಜಿ ಮಾತನಾಡಿ, ಪೂಜ್ಯರ ಹುಟ್ಟು ಹಬ್ಬವನ್ನು ಕಾಲೇಜಿನ ಸಿಬ್ಬಂದಿಯವರು ಆಚರಿಸುತ್ತಿರುವುದು ಸಂತಸದ ವಿಷಯ. ಮಾನವರು ಈ ಭೂತಾಯಿಯ ಋಣ, ಸಮಾಜದ ಋಣ ತೀರಿಸಲು ಸಾಧ್ಯವಿಲ್ಲ. ಸಮಾಜದ ದೀನ-ದುರ್ಬಲರ ಏಳಿಗೆಗಾಗಿ ಶ್ರಮಿಸುತ್ತಿರುವ ಪೂಜ್ಯರ ಕಾರ್ಯ ಶ್ಲಾಘನೀಯ ಎಂದರು.

ಪ್ರಾಚಾರ್ಯ ಡಾ. ವಿ.ಎ. ಹಿತ್ತಲಮನಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಡಾ. ದತ್ತು ವೈಕುಂಟೆ, ಆರ್.ಎಸ್. ತಿರುಮಲೆ ಹಾಗು ಸಿಬ್ಬಂದಿ ವರ್ಗದವರು, ಪ್ರಶಿಕ್ಷಣಾರ್ಥಿಗಳು ಹಾಜರಿದ್ದರು. ಪ್ರಾರ್ಥನೆಯನ್ನು ವೈದೇಹಿ, ಸ್ವಾಗತವನ್ನು ಪ್ರೊ. ಜೆ.ಎಸ್. ಇಟಗಿ ನಿರ್ವಹಿಸಿದರು. ಪ್ರೊ. ಡಿ.ಎಸ್. ಗಾಳಿ ನಿರೂಪಿಸಿದರು. ಡಾ. ಆರ್. ಎಫ್. ಹೂಗಾರ ವಂದಿಸಿದರು.



ಗದಗ ನಗರದ ಎಸ್.ಎಮ್.ಇ ಸಂಸ್ಥೆಯಅಬ್ದುಲ್ ಕಲಾಂ ಬಿ.ಸಿ.ಎ ಮಹಾವಿದ್ಯಾಲಯ ಶೈಕ್ಷಣಿಕ ಸಮೂಹ ಸಂಸ್ಥೆಯ ನೂತನ ಬಸ್ ಉದ್ಘಾಟಿಸಿದ ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿಯ ಚುನಾಯಿತ ಅಧ್ಯಕ್ಷ ಕೃಷ್ಣಗೌಡ ಪಾಟೀಲ ಅವರನ್ನು ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ ಹಾಗೂ ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿಯ ಉಪಾಧ್ಯಕ್ಷ ಅಹಮ್ಮದ ಹುಸೇನ ಖಾಜಿ ಅವರು ಸನ್ಮಾನಿಸಿ, ಗೌರವಿಸಿದರು. ಈ ಸಂದರ್ಭದಲ್ಲಿ ಶಾಲಾ ಮಕ್ಕಳು ಹಾಗೂ ಸಿಬ್ಬಂದಿಗಳಿದ್ದರು.

## ಬಿಹಾರದ ಸರ್ಕಾರಿ ಉದ್ಯೋಗಗಳಲ್ಲಿ ಮಹಿಳೆಯರಿಗೆ ಶೇ.35 ಮೀಸಲಾತಿ; ನಿತೀಶ್ ಕುಮಾರ್ ಘೋಷಣೆ

■ವಿಜಯಸಾಕ್ಷಿ ಸುದ್ದಿ, ಬಿಹಾರ

ಮುಂಬರುವ ವಿಧಾನಸಭಾ ಚುನಾವಣೆಗಳಿಗೆ ಮುಂಚಿತವಾಗಿ, ಬಿಹಾರದ ಸರ್ಕಾರಿ ಉದ್ಯೋಗಗಳ ಪ್ರತಿಯೊಂದು ವರ್ಗದ ಎಲ್ಲ ಹುದ್ದೆಗಳಲ್ಲಿ ಶೇಕಡಾ 35 ರಷ್ಟು ಬಿಹಾರದ ಖಾಯಂ ನಿವಾಸಿ ಮಹಿಳೆಯರಿಗೆ ಮಾತ್ರ ಮೀಸಲಿಡಲಾಗುವುದು ಎಂದು ಮುಖ್ಯಮಂತ್ರಿ ನಿತೀಶ್ ಕುಮಾರ್ ಮಂಗಳವಾರ ಘೋಷಿಸಿದ್ದಾರೆ.

### ಮಳೆಗಾಗಿ ದೇವರ ಮೊರೆಹೋದ ರೈತ ಸಮುದಾಯ । ಹಲವೆಡೆ ವಿಶೇಷ ಪೂಜೆ

# ಮುನಿದ ಮಳೆರಾಯನಿಗೆ ರೈತ ಸಮುದಾಯದ ಪ್ರಾರ್ಥನೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕಳೆದ ನಾಲ್ಕೈದು ವರ್ಷಗಳಿಂದ ಮುಂಗಾರು ಮಳೆ ರೈತರೊಂದಿಗೆ ಚೆಲ್ಲಾಟ ಆಡುತ್ತಾ ಬರುತ್ತಿದೆ. ಪ್ರಾರಂಭದಲ್ಲಿ ಪೂರ್ವ ಮುಂಗಾರು ಆರ್ಭಟ ಜೋರಾಗಿರುತ್ತದೆ. ಇದನ್ನು ನಂಬಿದ ರೈತ ಸಮುದಾಯ ಸಾವಿರಾರು ರೂ ಖರ್ಚ ಮಾಡಿ, ಬೀಜ, ಗೊಬ್ಬರ, ಟ್ರ್ಯಾಕ್ಟರ್ ಬಾಡಿಕೆ, ಎತ್ತಿನ ಬಾಡಿಗೆ, ಕೃಷಿ ಕಾರ್ಮಿಕರ ಕೂಲಿ ಹೀಗೆ ಹಲವು ರೀತಿಯಲ್ಲಿ ಹಣ ಖರ್ಚು ಮಾಡಿ ಬಿತ್ತನೆಗೆ ಮುಂದಾಗುತ್ತಾರೆ. ಆದರೆ, ಆರಂಭದಲ್ಲಿ ಹರ್ಷಗೊಳ್ಳಿಸಿದ ಮುಂಗಾರು, ಬಿತ್ತನೆ ನಂತರ ಮುನಿಸಿಕೊಂಡು ರೈತರಲ್ಲಿ ನಿರಾಸೆ ಮೂಡಿಸುತ್ತಿದೆ.

ಇದೀಗ, ಮಳೆಗಾಗಿ ಪ್ರಾರ್ಥಿಸಿ ರೈತರು ವಿವಿಧ ದೇವರುಗಳ ಮೊರೆ ಹೋಗುತ್ತಿದ್ದಾರೆ. ಗುರ್ಜಿ ಆಟ, ಹಳ್ಳ ಪೂಜೆ, ಬನ್ನಿ ಮಹಾಕಾಳಿಕಾದೇವಿ ಪೂಜೆ, ಅಭಿಷೇಕ, ಕಪ್ಪೆ ಮದುವೆ, ಕೆರೆ ಪೂಜೆ, ದೀಡ್ ನಮಸ್ಕರ, ಉಪವಾಸ ಸೇರಿದಂತೆ ಹಲವು ರೀತಿಯಲ್ಲಿ ಮಳೆರಾಯನನ್ನು ಕರೆಯತೊಡಗಿದ್ದಾರೆ.



ಮುಂಗಾರು ಮಳೆ ಆಗದಿದ್ದರೆ ಸಾಲ-ಸೋಲ ಮಾಡಿ ಬಿತ್ತನೆ ಬೀಜ, ಗೊಬ್ಬರ, ಕೂಲಿ ಖರ್ಚು ಮಾಡಿರುತ್ತಾರೆ. ಮುಂಗಾರು ಕೈಕೊಟ್ಟರೆ ಕಂಗಾಲಾಗಿ ಊರು ಬಿಡುವ ಪ್ರಸಂಗ ಕೂಡ ಎದುರಾಗುತ್ತಿದೆ. ಹೀಗಾಗಿ ನಾವು ಮಳೆಗಾಗಿ ಹಲವು ರೀತಿಯಲ್ಲಿ ಪೂಜೆಗಳನ್ನು ಸಲ್ಲಿಸುವ ಮೂಲಕ ಮುನಿಸಿಕೊಂಡ ಮಳೆರಾಯನಿಗೆ ಪ್ರಾರ್ಥನೆ ಮಾಡುತ್ತೇವೆ ಎಂದು ಅಬ್ಬಿಗೇರಿ ಗ್ರಾಮದ ರೈತರಾದ ಶೇಖಪ್ಪ ಬಿಲ್ಲರ, ಪರ್ವತಗೌಡ ಪಾಟೀಲ, ದೇವಪ್ಪ ಬಿಲ್ಲರ, ವಿರೂಪಾಕ್ಷಗೌಡ ಪಾಟೀಲ ಹೇಳಿದರು.

ಮುತ್ತೈದೆಯರು ಮಡಿಯಿಂದ ಬನ್ನಿ ಮಹಾಂಕಾಳಿದೇವಿ ಆವರಣವನ್ನು ಸ್ವಚ್ಛಗೊಳಿಸಿ, ಸೆಗಣಿ ಸಾರಿಸಿ, ಜೋಳವನ್ನು ಸುರಿದು ಅದರ ಮೇಲೆ ನೀರು ತುಂಬಿದ ತಾಮ್ರದ ಕೊಡಕ್ಕೆ ಮಲ್ಲಿಗೆ ಹೂ ಮುಡಿಸಿ, ಗ್ರಾಮದ ದೇವರು ಹೊತ್ತ ಮಹಿಳೆಯೊಂದಿಗೆ ಕೊಡವನ್ನು ತಿರುಗಿಸುತ್ತಾರೆ. ಕೊಡವು ಸರಳವಾಗಿ ತಿರುಗಲು ಪ್ರಾರಂಭಿಸಿದರೆ ಮತ್ತು ಅದು ಉರುಳಿ ಬಿದ್ದರೆ ಮಳೆಯಾಗುತ್ತದೆ ಎಂದರ್ಥ. ಒಂದು ವೇಳೆ ತುಂಬಿದ ಕೊಡವು ಬಿಗಿಯಾಗಿ ಸುತ್ತದಿದ್ದರೆ ಮಳೆ ಬರುವುದು ಕಷ್ಟ ಎಂಬ ನಂಬಿಕೆ ಕೂಡ ಚಾಲ್ತಿಯಲ್ಲಿದೆ.

ಗ್ರಾಮದ ಚಿಕ್ಕ ಮಕ್ಕಳು ಮೈತುಂಬಾ ರೊಟ್ಟಿ ಹಂಚಿನ ಕಾಡಿಗೆಯನ್ನು ಹಚ್ಚಿಕೊಂಡು ತಲೆಯ ಮೇಲೆ ರೊಟ್ಟಿ ಹಂಚು ಹಾಕಿಕೊಂಡು ಅದಕ್ಕೆ ಸೆಗಣಿ ಉತ್ರಾಣಿ ಪತ್ರಿ, ಗಿಡದ ಕಡ್ಡಿಗಳನ್ನು ಇಟ್ಟುಕೊಂಡು ಮಳೆಗಾಗಿ ಪ್ರಾರ್ಥನೆ ಮಾಡುತ್ತಾ ಮನೆ ಮನೆಗೆ ತೆರಳಿ ಮೈಮೇಲೆ ನೀರು ಸುರಿಸಿಕೊಳ್ಳುವದು ಗುರ್ಜಿ ಆಟ. ಅದಕ್ಕೆ ರೈತ ಮಹಿಳೆಯರು ಉದ್ದಿನ ಕಡ್ಡಿಯಿಂದ ಪೂಜೆ ಮಾಡಿ ತಮ್ಮಲ್ಲಿರುವ ಜೋಳ, ಅಕ್ಕಿ, ಗೋಧಿಯನ್ನು ದಾನ ಮಾಡುತ್ತಾರೆ. ತಾವು ಸಂಗ್ರಹಿಸಿದ ಧಾನ್ಯಗಳನ್ನು ಒಂದಡೆ ಸಂಗ್ರಹ ಮಾಡಿ ದೇವರಿಗೆ ವಿಶೇಷ ಪೂಜೆ ಸಲ್ಲಿಸಿ ಅನ್ನ ಸಂತರ್ಪಣೆ ಹಮ್ಮಿಕೊಳ್ಳುವ ಪದ್ಧತಿ ಚಾಲ್ತಿಯಲ್ಲಿದೆ.

ಮುಂಗಾರು ಮಳೆ ಆಗಮನಕ್ಕೆ ಮಹಿಳೆಯರು ಮತ್ತು ರೈತರು, ಚಿಕ್ಕ ಮಕ್ಕಳು ಸಂಪ್ರದಾಯದಂತೆ ಹಳ್ಳಕ್ಕೆ ತೆರಳಿ ವಿಶೇಷ ಪೂಜೆ ಸಲ್ಲಿಸಿ ಪ್ರಾರ್ಥಿಸುತ್ತಿದ್ದಾರೆ. ಕೊಳ್ಳುತ್ತಿದ್ದಾರೆ.

ಗ್ರಾಮೀಣ ಪ್ರದೇಶದಲ್ಲಿ ರೈತ ಸಮುದಾಯ ಮಳೆಗಾಗಿ ತಾವು ಬೆಳೆದ ಅಲ್ಪಸ್ವಲ್ಪ ಕಾಳು-ಕಡಿಗಳನ್ನು ಸಂಗ್ರಹಣೆ ಮಾಡಿ, ಜೋಳದ ಸಂಗಟಿ, ಸಾರು ಮಾಡಿ ಎಲ್ಲರೂ ಪ್ರಸಾದವನ್ನು ಸ್ವೀಕರಿಸುವ ಪದ್ಧತಿಯೂ ನಡೆಯುತ್ತಿದೆ.

ಮುಂಗಾರು ಮಳೆಗಾಗಿ ಪ್ರಾರ್ಥಿಸಿ ಪ್ರಸಕ್ತ ವರ್ಷ ಎರಡು ಕ್ವಿಂಟಲ್ ಸಂಗಟಿ, 1 ಕ್ವಿಂಟಲ್ ಸಿರಾ ಮತ್ತು ಸಾರು ಮಾಡಿ ಪ್ರಸಾದ ಸೇವೆ ಹಮ್ಮಿಕೊಳ್ಳಲಾಗಿದೆ. ನಮ್ಮ ಪ್ರಾರ್ಥನೆಯನ್ನು ಆಲಿಸಿ ವರುಣ ದೇವ ಕೃಪೆದೋರಲೆಂದು ರೈತರಾದ ನಾವೆಲ್ಲರೂ ಬೇಡಿಕೊಳ್ಳುತ್ತಿದ್ದೇವೆ ಎಂದು ಬಾಬುಗೌಡ ಪಾಟೀಲ, ಹನಮಪ್ಪ ಬೇಲೇರಿ, ಜಯಪ್ಪ ಹುಲ್ಲೂರ, ಶರಣಯ್ಯ ಅರಳಲಿಮಠ, ಕಳಕಪ್ಪ ಬಿಲ್ಲ ಮುಂತಾದವರು ತಿಳಿಸಿದರು.

# ಆತ್ಮಸಾಕ್ಷಿ ಒಪ್ಪುವಂತೆ ಚಿಕಿತ್ಸೆ ನೀಡಿ




■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಆಧುನಿಕ ಯುಗದಲ್ಲಿ ಆರೋಗ್ಯದ ಸಮಸ್ಯೆಗಳು ಹೆಚ್ಚಾಗುತ್ತಿದ್ದು, ಈ ನಿಟ್ಟಿನಲ್ಲಿ ಆರೋಗ್ಯಯುತ, ಸದೃಢ ಸಮಾಜ ನಿರ್ಮಾಣ ಮಾಡುವಲ್ಲಿ ವೈದ್ಯರ ಪಾತ್ರ ಮಹತ್ವದ್ದಾಗಿದೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ತಾಲೂಕಿನ ಕಡಕೋಳ ಬಸವಬೆಟ್ಟದ ಬಸವಯೋಗಾಶ್ರಮ ಮತ್ತು ನಿಸರ್ಗ ಚಿಕಿತ್ಸಾಲಯದಲ್ಲಿ ಶಿರಹಟ್ಟಿ-ಲಕ್ಷ್ಮೇಶ್ವರ ತಾಲೂಕಾ ವೈದ್ಯರ ಸಂಘದಿಂದ ವೈದ್ಯರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ವೈದ್ಯೋ ನಾರಾಯಣೋ ಹರಿ ಎಂಬ ವೇದೋಕ್ತಿಯಂತೆ, ವೈದ್ಯ ವೃತ್ತಿ ಅತ್ಯಂತ ಪವಿತ್ರವಾಗಿದ್ದು, ಎಲ್ಲರಿಗೂ ಇಂತಹ ಭಾಗ್ಯ ಸಿಗುವದಿಲ್ಲ. ಸಿಕ್ಕಿರುವ ವೃತ್ತಿಯಲ್ಲಿ ಆತ್ಮಸಾಕ್ಷಿಗೆ ಅನುಗುಣವಾಗಿ ತಮ್ಮ ಆಸ್ಪತ್ರೆಗಳಿಗೆ ಬರುವ ರೋಗಿಗಳಿಗೆ ಸೂಕ್ತ ಚಿಕಿತ್ಸೆ ನೀಡಬೇಕು. ನಾನು ಕೂಡಾ ಶಾಸಕನಾಗಿ ಆಯ್ಕೆಯಾಗಿದ್ದರೂ ಪ್ರತಿನಿತ್ಯವೂ ರೋಗಿಗಳಿಗೆ ತಪಾಸಣೆ ನಡೆಸುತ್ತಿದ್ದೇನೆ. ಇದರ ಜೊತೆಗೆ ಶಾಸಕನಾಗಿ ನನ್ನ ಜವಾಬ್ದಾರಿಯನ್ನೂ ಮುನ್ನಡೆಸಿಕೊಂಡು ಹೋಗುತ್ತಿದ್ದೇನೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಡಾ. ಪಿ.ಡಿ. ತೋಟದ ವಹಿಸಿದ್ದರು. ಅತಿಥಿಗಳಾಗಿ ಬಸವ ಯೋಗಾಶ್ರಮದ ಗುರುಮಾತೆ ಓಂಕಾರೇಶ್ವರಿ ಮಾತಾಜಿ, ತಾಲೂಕಾ ಆರೋಗ್ಯಾಧಿಕಾರಿ ಡಾ. ಸುಭಾಸ ದೈಗೊಂಡ, ಡಾ. ಎಸ್.ಎಂ. ಬುರಬುರೆ, ಡಾ. ಆಶಾ ಪಿ.ತೋಟದ, ಡಾ. ಡಿ.ಡಿ. ಬಡೇಖಾನ, ಡಾ. ಎಂ.ಸಿ. ಪ್ರಭುಗೌಡರ, ಡಾ. ಪವನ ಟಿ.ಮಹೇಂದ್ರಕರ ಮುಂತಾದವರು ಉಪಸ್ಥಿತರಿದ್ದರು.

## ಮೊಹರಂ ನಿಮಿತ್ತ ಶರಬತ್ ವಿತರಣೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿ ಹಿಂದೂ ಮತ್ತು ಮುಸ್ಲಿಮರ ಭಾವೈಕ್ಯತೆಯ ಸಂಕೇತವಾದ ಮೊಹರಂ ಹಬ್ಬವನ್ನು ಅದ್ದೂರಿಯಾಗಿ ಆಚರಿಸಲಾಯಿತು. ಪಟ್ಟಣದ ಬಳ್ಳಾರಿ ಮೊಹಲ್ಲಾ ಯಂಗ್ ಕಮಿಟಿ ವತಿಯಿಂದ ಶರಬತ್ ಹಂಚುವ ಮೂಲಕ ಮೊಹರಂ ಹಬ್ಬ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಹಫೀಜ್‌ಮಹಮ್ಮದ್ ಸಾಧಿಕ, ಮಹಮ್ಮದ್ ಅಫಜಲ್ ರಿತ್ತಿ, ದಾದಾಪೀರ್ ಬಂಕಾಪೂರ, ಮುನ್ನಾ ಕಮತಗಿ, ಸೋಹಲ್ ರಿತ್ತಿ, ಫಯಾಜ್ ಕನಕಪುರ, ಸುಬಾನಿ ರಿತ್ತಿ, ಸಿದ್ದಿಕ ರಿತ್ತಿ, ಮಹಮ್ಮದ್ ನದಾಫ್, ತನವೀರ ರಿತ್ತಿ, ತಾಜ್ ಕೊತೆವಾಲೆ, ರಜಾಕ ಬಳಗಾರ, ಹಯ್ಯಾತ್ ಬಳಗಾರ, ಮುಜಾಮೀಲ್ ನದಾಫ್, ರಿಯಾಜ್ ಗುಡಗೇರಿ, ರಿಯಾಜ್ ಬೆಳವಿಗಿ, ಅಬ್ದುಲ್ ರಿತ್ತಿ ಮುಂತಾದವರಿದ್ದರು.



## ಶಿರಹಟ್ಟಿಯಲ್ಲಿ ಹೆಜ್ಜೆ ಮೇಳದ ರಂಗು



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಕೋಮು-ಸೌಹಾರ್ದತೆಯ ಹರಿಕಾರ ಕರ್ತೃ ಶ್ರೀ ಜ. ಫಕೀರೇಶ್ವರರ ತಪೋ ಭೂಮಿಯಾದ ಶಿರಹಟ್ಟಿ ಪಟ್ಟಣದಲ್ಲಿ ರವಿವಾರ ಹಿಂದೂ-ಮುಸ್ಲಿಂ ಭಕ್ತರು ಜೊತೆಗೂಡಿ ಹೆಜ್ಜೆಮೇಳ ಹಾಕುವುದರೊಂದಿಗೆ ಮೊಹರಂ ಹಬ್ಬವನ್ನು ಆಚರಣೆ ಮಾಡಿದರು.

ಪಟ್ಟಣವೂ ಸೇರಿದಂತೆ ವಿವಿಧ ಗ್ರಾಮೀಣ ಪ್ರದೇಶಗಳಲ್ಲಿ ಮುಸ್ಲಿಂ ಬಾಂಧವರು ಅಗ್ನಿಕುಂಡದಲ್ಲಿ ದೇವರನ್ನು ಹೊತ್ತುಕೊಂಡು ತಮ್ಮ ಭಕ್ತಿಯನ್ನು ಸಮರ್ಪಿಸಿದರು. ಅನೇಕ ಹಿಂದೂಗಳು ಸಹ ಈ ಹಬ್ಬದಲ್ಲಿ ಪಾಲ್ಗೊಂಡು ಪ್ರಾರ್ಥನೆಯನ್ನು ಸಲ್ಲಿಸಿದರು. ಮೊಹರಂ ಹಬ್ಬದಲ್ಲಿ ದೇವರ ಮೆರವಣಿಗೆಯು ಅತ್ಯಂತ ಆಕರ್ಷಣೀಯವಾಗಿದ್ದು, ಇದರಲ್ಲಿ ಯುವಕರು ಲೇಜಿಮ್ ಹಿಡಿದು ಜಾನಪದ ಸೊಗಡಿನ ಹಾಡಿಗೆ ನೃತ್ಯ ಮಾಡುತ್ತಾ, ಸನಾದಿಯ ನಿನಾದಕ್ಕೆ ಹುಚ್ಚೆದ್ದು ಕುಣಿದು ಕುಪ್ಪಳಿಸಿದರು. ಇದರಲ್ಲಿ ಶಿರಹಟ್ಟಿಯ ಡಾ. ಬಿ.ಆರ್. ಅಂಬೇಡ್ಕರ ನಗರದ ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಹೆಜ್ಜೆ ಮೇಳಕ್ಕೆ ರಂಗು ತಂದರು.

ಮುಸ್ಲಿಂ ಬಾಂಧವರೇ ಇಲ್ಲದ ತಾಲೂಕಿನ ತಾರೀಕೊಪ್ಪ ಗ್ರಾಮದಲ್ಲಿ ಹಿಂದೂಗಳೇ ಅಲಾಯಿ ದೇವರುಗಳನ್ನು ಕೂರಿಸಿ ಮೊಹರಂ ಹಬ್ಬವನ್ನು ಆಚರಿಸಿ ಅಗ್ನಿಕುಂಡದಲ್ಲಿ ಹಾಯುವುದರ ಮೂಲಕ ತಮ್ಮ ಭಕ್ತಿಯನ್ನು ಸಮರ್ಪಿಸಿದರು.

### ಮುಸ್ಲಿಮರೇ ಇಲ್ಲದ ಒಡೆಯರ ಮಲ್ಲಾಪುರದಲ್ಲಿ ಹಿಂದೂಗಳಿಂದ ಮೊಹರಂ ಹಬ್ಬ

# ಸಂಪ್ರದಾಯಬದ್ಧ ಮೊಹರಂ ಆಚರಣೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತ್ಯಾಗ-ಬಲಿದಾನದ ಸಂಕೇತವಾದ ಮೊಹರಂ ಹಬ್ಬವನ್ನು ರವಿವಾರ ಪಟ್ಟಣ ಸೇರಿ ತಾಲೂಕಿನಾದ್ಯಂತ ಹಿಂದೂ-ಮುಸ್ಲಿಂ ಬಾಂಧವರು ಸಂಪ್ರದಾಯಬದ್ಧವಾಗಿ ಆಚರಿಸಿದರು. ಪಟ್ಟಣದ ಹಾವಳಿ ಹನಮಪ್ಪನ ದೇವಸ್ಥಾನದ ಹತ್ತಿರ ಪಟ್ಟಣದ ಸುಮಾರು 15 ಮಸೀದಿಗಳ ಪಾಂಜಾಗಳು ಸೇರಿ ಅಲ್ಲಿಂದ ಮೆರವಣಿಗೆಯಲ್ಲಿ ಬಜಾರ್ ರಸ್ತೆಯ ಮೂಲಕ ಸಾಗಿ ಸೋಮೇಶ್ವರ ಪಾದಗಟ್ಟಿ, ಪುರಸಭೆ ಮುಂದೆ ಹಾಯ್ದು ಶಿಗ್ಲಿ ಕ್ರಾಸ್‌ವರೆಗೆ ಸಾಗಿ ಚೋಟೆ ಲಂಕಾಪತಿ ಮಸೀದಿಗೆ ಭೇಟಿ ನೀಡಿ ಮತ್ತೆ ತಮ್ಮ ತಮ್ಮ ಮೂಲ ಸ್ಥಳಗಳಿಗೆ ಸಾಗುವುದು ವಾಡಿಕೆಯಾಗಿದ್ದು, ಸಂಜೆ ಮತ್ತೆ ಎಲ್ಲ ಪಾಂಜಾಗಳು ಸೇರಿ ಹೊಳೆಗೆ ಹೋಗುವ ಸಂಪ್ರದಾಯ ಹಿಂದಿನಿಂದ ನಡೆದುಕೊಂಡು ಬಂದಿದೆ.



ಪಟ್ಟಣದಲ್ಲಿನ ಮಸೀದಿ, 15ಕ್ಕೂ ಹೆಚ್ಚು ಮೊಹಲ್ಲಾಗಳಲ್ಲಿ ಸ್ಥಾಪಿಸಿದ್ದ ಅಲೈ ದೇವರು ಮತ್ತು ಡೋಲಿ ಹಾಗೂ ಹಸೇನ, ಹುಸೇನ ಮತ್ತು ಬೀಬಿ ಪಾತೀಮಾ ಪ್ರತೀಕವಾದ ಪಾಂಜಾಗಳ (ದೇವರು) ಭವ್ಯವಾದ ಮೆರವಣಿಗೆ ನಡೆಸಲಾಯಿತು. ನಂತರ ಅಗೀನ ಹಾಯುವುದು, ಶಸ್ತ್ರ ಸೇವೆ, ಬಾರಕೋಲು ಸೇವೆಯ ಮೂಲಕ ಭಕ್ತಿ ಪ್ರದರ್ಶಿಸಲಾಯಿತು. ಮುಸ್ಲಿಮರೇ ಇಲ್ಲದ ತಾಲೂಕಿನ ಒಡೆಯರ ಮಲ್ಲಾಪುರದಲ್ಲಿ ಹಿಂದೂಗಳೇ ಮೊಹರಂ ಹಬ್ಬ ಆಚರಿಸಿದರು.

ಮೆರವಣಿಗೆಯಲ್ಲಿ ದೂದನಾನಾ ದರ್ಗಾ ಕಮಿಟಿ ಅಧ್ಯಕ್ಷ ಸುಲೇಮಾನ್ ಕಣಕೆ, ಅಂಜುಮನ್ ಕಮಿಟಿ ಅಧ್ಯಕ್ಷ ಎಂ.ಎಂ. ಗದಗ, ಎಸ್.ಕೆ. ಹವಾಲ್ದಾರ, ರಾಜೀವ ಕುಂಬಿ, ದಾದಾಪೀರ ಮುಚ್ಚಾಲೆ, ದಾದಾಪೀರ ತಂಬಾಕದ, ಎನ್.ಎಂ. ಗದಗ, ಕಿರಣ ನವಲೆ, ಮಹೇಶ ಹೊಗೆಸೊಪ್ಪಿನ್, ಇಸ್ಮಾಯಿಲ್ ಆಡೂರ, ನಾರಾಯಣಸಾ ಪವಾರ, ಶರಣು ಗೋಡಿ, ಬಸವಣ್ಣೆಪ್ಪ ನಂದೆಣ್ಣವರ, ಟಾಕಪ್ಪ ಸಾತಪೂತೆ, ಚಂದ್ರಣ್ಣ ಹೂಗಾರ, ಸಂತೋಷ ಗದಗ, ಅಣಜಾಣವರ, ದಾದಾಪೀರ ಕಾರಡಗಿ, ಫಯಾಜ್ ಅತ್ತಿಗೇರಿ, ಹಬೀಬುಲ್ಲಾ ಕರೀಮಖಾನವರ, ಖಲಂದರ ಸೂರಣಗಿ, ಜಿಲಾನಿ ಸೂರಣಗಿ, ಪಿಎಸ್‌ಐ ನಾಗರಾಜ ಗಡದ, ಕ್ರೈಂ ವಿಭಾಗದ ಪಿಎಸ್‌ಐ ಟಿ.ಕೆ.ರಾಥೋಡ ಸೇರಿದಂತೆ ಹಿಂದೂ-ಮುಸ್ಲಿಂ ಬಾಂಧವರು ಪಾಲ್ಗೊಂಡಿದ್ದರು. ಪೋಲಿಸ್ ಇಲಾಖೆಯಿಂದ ಸೂಕ್ತ ಬಂದೋಬಸ್ತ್ ಏರ್ಪಡಿಸಲಾಗಿತ್ತು.

## ಶಿಕ್ಷಕರಿಗೆ ತರಬೇತಿಗಳು ಅವಶ್ಯಕ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಶ್ರೀ ಬಸವೇಶ್ವರ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಬೆಂಗಳೂರು ರಾಷ್ಟ್ರೋತ್ಥಾನ ಪರಿಷತ್, ಗದಗ ಶಿಕ್ಷಣ ಭಾರತಿ ಆಶ್ರಯದಲ್ಲಿ ಶ್ರೀ ಬಸವೇಶ್ವರ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕರಿಗೆ ಆಯೋಜಿಸಿದ್ದ ಒಂದು ದಿನದ ತರಬೇತಿ ಕಾರ್ಯಕ್ರಮ ಯಶಸ್ವಿಯಾಗಿ ನಡೆಯಿತು.



ಶಾಲೆಯ ನೂತನ ಸದಸ್ಯ ವೀರಣ್ಣ ಹಳ್ಳಿ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಉಪನ್ಯಾಸಕರಾಗಿ ಆಗಮಿಸಿದ್ದ ರಾಷ್ಟ್ರೋತ್ಥಾನ ಪರಿಷತ್‌ನ ವೀರೇಂದ್ರ ಪಾಟೀಲ 'ಪಂಚಮುಖಿ ಶಿಕ್ಷಣ', ಎಸ್.ಎ. ಕಾಲೇಜು ಪ್ರಾಚಾರ್ಯ ವಾಯ್.ಸಿ. ಪಾಟೀಲ 'ರಾಷ್ಟ್ರೀಯ ಶಿಕ್ಷಣ ನೀತಿ', ಸೂಡಿಯ ವಿಜ್ಞಾನ ಶಿಕ್ಷಕ ಅಶೋಕ ಉಂಡಿ 'ಆದರ್ಶ ಶಿಕ್ಷಕ' ಎಂಬ ವಿಷಯಗಳ ಕುರಿತು ಉಪನ್ಯಾಸ ನೀಡಿದರು.

ಶಾಲೆಯ ಚೇರಮನ್ ಡಾ. ಜಿ.ಕೆ. ಕಾಳೆ ಅಧ್ಯಕ್ಷತೆ ವಹಿಸಿ ಮಾತನಾಡಿ, ಶಿಕ್ಷಕರಿಗೆ ಕಾಲಕಾಲಕ್ಕೆ ತರಬೇತಿಗಳು ಅವಶ್ಯಕ. ಶಿಕ್ಷಣ ರಂಗದಲ್ಲಿನ ಅಭಿವೃದ್ಧಿ ಮತ್ತು ಬೆಳವಣಿಗೆಗಳನ್ನು ತಿಳಿಯಲು ಇಂತಹ ಶಿಬಿರಗಳು ಸಹಕಾರಿ ಎಂದರು.

ಈ ಸಂದರ್ಭದಲ್ಲಿ ಎಸ್‌ಎವ್ವಿವ್ವಿಪಿ ಸಮಿತಿಯ ಆಡಳಿತಾಧಿಕಾರಿ ಎನ್. ಆರ್. ಗೌಡರ, ಸದಸ್ಯ ಬಸವರಾಜ ಕಳಕೊಣ್ಣವರ, ಮುಖ್ಯೋಪಾಧ್ಯಾಯೆ ಬಿ.ಜಿ. ಶಿರ್ಸಿ, ಎಮ್.ವಿ. ಕಡೆತೋಟದ, ಪೂರ್ಣಿಮಾ ಅಂಗಡಿ, ವಿ.ಪಿ. ಗ್ರಾಮಪುರೋಹಿತ, ಎಸ್.ವಿ. ಹಿರೇಮಠ, ವಿ.ಎಸ್. ಜಾಧವ್, ಎಸ್.ಕೆ. ಕುಲಕರ್ಣಿ, ಸಾವಿತ್ರಿ ಮಾನ್ವಿ, ಎಮ್.ಎಮ್. ಶಿಳ್ಳಿನ, ಗೀತಾ ಶಿಂಧೆ, ಕೆ.ಆಯ್. ಕೋಳಿವಾಡ, ಆಯ್.ಬಿ. ಒಂಟೇಲಿ, ಎನ್.ಜೆ. ಸಂಗನಾಳ, ಜೆ.ವಿ. ಕೆರಿಯವರ, ರಾಜೇಶ್ವರಿ ಈಟಿ, ಗೀತಾ ಕಂಬಳಿ, ರಜಿಯಾಬೇಗಂ, ವಿದ್ಯಾ ಮುಗಳಿ, ಜಯಶ್ರೀ ಮೆಣಸಗಿ, ಎಮ್.ಎಸ್. ಧರ್ಮಾಯತ, ಎಸ್.ಎ. ಚೋಳಿನ ಇನ್ನಿತರರು ಉಪಸ್ಥಿತರಿದ್ದರು.

## ಭಕ್ತಿ ಭಾವದ ಮೊಹರಂ ಆಚರಣೆ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ತ್ಯಾಗ-ಬಲಿದಾನಗಳ ಪ್ರತೀಕವಾದ ಮೊಹರಂ ಹಬ್ಬವನ್ನು ಇಲ್ಲಿಯ ಹಿಂದೂ-ಮುಸಲ್ಮಾನ ಭಾಂದವರು ಶೃದ್ಧಾ ಭಕ್ತಿಯಿಂದ ಆಚರಿಸಿ ಭಾವೈಕ್ಯತೆ ಮೆರೆದರು.

ಹಿರೇಮಸೂತಿ, ಲಾಲಶಾವಲಿ, ಬೋರೆಗಾರ, ತಾಡಪತ್ರಿ, ಬಾರಾ ಇಮಾಮ, ಗಂದೀಗೇರ ಮಸೂತಿಯಲ್ಲಿ ಕಳೆದ ಐದು ದಿನಗಳಿಂದ ಡೋಲಿ ಮತ್ತು ಪಾಂಜಾದೇವರನ್ನು ಪ್ರತಿಷ್ಠಾಪಿಸಲಾಗಿತ್ತು. ತಾಡಪತ್ರಿ ಮಸೂತಿ ಹೊರತುಪಡಿಸಿ 14 ಪಾಂಜಾ ಹಾಗೂ 2 ಡೋಲಿ ದೇವರನ್ನು ಬಜಾರ ರಸ್ತೆಯಲ್ಲಿ ಮೆರವಣಿಗೆ ನಡೆಸಲಾಯಿತು.



ಮೆರವಣಿಗೆಯಲ್ಲಿ ಯುವಕರ ತಂಡವು ಜಾನಪದ ಹಾಡುಗಳೊಂದಿಗೆ ಮಾಡಿದ ಕೋಲಾಟ ನೃತ್ಯ ಗಮನ ಸೆಳೆಯಿತು.

ಹಿರೇ ಮಸೂತಿಯಿಂದ ಬಜಾರ ರಸ್ತೆಯ ಮೂಲಕ ವಿರೂಪಾಕ್ಷೇಶ್ವರ ದೇವಸ್ಥಾನದ ಮುಂಭಾಗದಲ್ಲಿ ಎಲ್ಲ ಪಾಂಜಾ ಹಾಗೂ ಡೋಲಿ ದೇವರುಗಳು ಸಂಗಮಗೊಂಡ ನಂತರ ಪಾರ್ಥನೆ ನೆರವೇರಿತು. ಸಂಜೆ ಮತ್ತೆ ಮೆರವಣಿಗೆ ಮೂಲಕ ಹೊಳೆಗೆ ಕಳಿಸಲಾಯಿತು.

# ಪ್ರಜೆಗಳಿಂದ ಆಯ್ಕೆಯಾದವರು ಪ್ರಜಾಸೇವಕರು

■ವಿಜಯಸಾಕ್ಷಿ ಸುದ್ದಿ, ಗದಗ

ರಾಜಪ್ರಭುತ್ವ ಕಾಲದಲ್ಲಿ ರಾಜನೇ ಸರ್ವಶ್ರೇಷ್ಠನಾಗಿದ್ದ. ಅವನ ಆಜ್ಞೆ ಮೀರುವ ಹಾಗಿರಲಿಲ್ಲ. ಇಂದು ಇರುವುದು ಪ್ರಜಾಪ್ರಭುತ್ವ ಕಾಲ. ಇಲ್ಲಿ ಪ್ರಜೆಗಳೇ ಪ್ರಭುಗಳು. ಪ್ರಜೆಗಳ ಮತಗಳಿಂದ ಆಯ್ಕೆಯಾದ ಅಭ್ಯರ್ಥಿಗಳು ಪ್ರಜಾಸೇವಕರಾಗಿರುತ್ತಾರೆ. ಅವರೊಂದಿಗೆ ಕೈ ಜೋಡಿಸಿ ನಾಡಿನ ಹಾಗೂ ದೇಶದ ಅಭಿವೃದ್ಧಿಗೆ ಎಲ್ಲರೂ ಮುಂದಾಗಬೇಕು. ಅದೇ ಮಾದರಿಯಲ್ಲಿ ಇಂದು ಇಲ್ಲಿಯ ಶಾಲಾ ಸಂಸತ್ತು ರಚನೆಯಾಗಿದೆ. ಶಾಲೆಯ ಶಿಸ್ತು, ಸ್ವಚ್ಛತೆ ಹಾಗೂ ಶಾಲಾ ಅಭಿವೃದ್ಧಿಗೆ ಪೂರಕವಾಗಿ ಕೆಲಸ ಮಾಡಬೇಕು ಎಂದು ಸಿ.ಎಸ್. ಪಾಟೀಲ ಹಿರಿಯ ಕನ್ನಡ ಪ್ರಾಥಮಿಕ ಶಾಲೆಯ ಮುಖ್ಯಾಧ್ಯಾಪಕ ಡಾ. ರಾಮಚಂದ್ರ ಹಂಸನೂರರು ನುಡಿದರು.



ಅವರು ಶಾಲಾಂಸತ್ತು ರಚನೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.


ಹಿರಿಯ ಶಿಕ್ಷಕ ಎಚ್.ಪಿ. ಹಿರೇಮಠರು ಆಯ್ಕೆಯಾದ ವಿದ್ಯಾರ್ಥಿಗಳನ್ನು ಅಭಿನಂದಿಸಿ ಮಕ್ಕಳಿಗೆ ಹಿತವಚನ ಹೇಳಿದರು. ಕೆ.ಸಿ. ಬಾಗೇವಾಡಿಯವರು ಸಂದರ್ಭೋಚಿತವಾಗಿ ಮಾತನಾಡಿದರು.

ಶಾಲಾ ಪ್ರಧಾನಿಯಾಗಿ ಜನ್ನಿಫರ ಡೇವಿಡ್ ಝಳಕಿ, ಉಪಪ್ರಧಾನಿಯಾಗಿ ಅಮೃತಯ್ಯ ವೀರೇಶ ಹಿರೇಮಠ ಆಯ್ಕೆಯಾದರು. ಉಳಿದಂತೆ ಕ್ರೀಡಾ ಮಂತ್ರಿಯಾಗಿ ರಾಮು ಪ್ರಭಳೇಕರ, ವಾರ್ತಾ ಮಂತ್ರಿಯಾಗಿ ನಿರ್ಮಲಾ ಲಮಾಣಿ, ಆರೋಗ್ಯ ಮಂತ್ರಿಯಾಗಿ ಕೀರ್ತಿ ಅಂಗಡಿ, ಹಣಕಾಸು ಮಂತ್ರಿಯಾಗಿ ದ್ರಾಕ್ಷಾಯಣಿ ಪಾಟೀಲ, ಚರ್ಚಾಕೂಟ ಮಂತ್ರಿಯಾಗಿ ಆಫ್ರೀನ್ ಕೊಪ್ಪಳ, ಸ್ವಚ್ಛತಾ ಮಂತ್ರಿಯಾಗಿ ಮೈಲಾರಿ ಹಾದಿಮನಿ, ಶಹಜಾದಬಿ ಮುಲ್ಲಾ, ಸಂತೋಷ ವಾಲ್ಮೀಕಿ ಆಯ್ಕೆಯಾದರು.

ಶಿಕ್ಷಕಿಯರಾದ ಶ್ವೇತಾ ಪವಾರ ಹಾಗೂ ಗಾಯತ್ರಿ ಪಾಟೀಲ ಚುನಾವಣಾ ಅಧಿಕಾರಿಗಳಾಗಿ ಕಾರ್ಯ ನಿಭಾಯಿಸಿದರು. ವಿ.ವಿ. ಪಾಟೀಲ ಹಾಗೂ ಮಂಜುಳಾ ಪಾಟೀಲ ಮತ ಎಣಿಕೆದಾರರಾಗಿ ಕಾರ್ಯ ನಿಭಾಯಿಸಿದರು.

ನಿರ್ಮಲಾ ಲಮಾಣಿ ಪ್ರಾರ್ಥಿಸಿದರು. ವಂದನಾ ಸ್ವಾಗತಿಸಿದರು. ಶಿಕ್ಷಕಿ ಎಸ್.ಎಮ್. ತಳವಾರ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

## ವೆಂಕಟೇಶ್ವರ ದೇವಸ್ಥಾನಕ್ಕೆ ಪಾದಯಾತ್ರೆ ನಾಳೆ



■ವಿಜಯಸಾಕ್ಷಿ ಸುದ್ದಿ, ಗದಗ

ಜುಲೈ 10ರಂದು ಗುರುಪೂರ್ಣಿಮೆಯ ನಿಮಿತ್ತ ಬೆಳಿಗ್ಗೆ 6 ಗಂಟೆಗೆ ಶ್ರೀ ವೀರನಾರಾಯಣ ದೇವಸ್ಥಾನದಿಂದ 500ಕ್ಕೂ ಹೆಚ್ಚು ಭಕ್ತಾದಿಗಳಿಂದ ಗದಗ ಜಿಲ್ಲೆಯ ಉದ್ಭವಮೂರ್ತಿ ವೆಂಕಟಾಪುರ ವೆಂಕಟೇಶ್ವರ ದೇವಸ್ಥಾನಕ್ಕೆ ಸತತ 3ನೇ ವರ್ಷದ ಪಾದಯಾತ್ರೆ ಹಮ್ಮಿಕೊಳ್ಳಲಾಗಿದೆ ಎಂದು ಪಾದಯಾತ್ರೆ ಸಮಿತಿಯ ಪ್ರಮುಖರಾದ ಬಾಬು ಬಾಕಳೆ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ನಮ್ಮ ದೇಶ ಹಾಗೂ ರಾಜ್ಯದ ಜನತೆಗೆ ಆಯುಷ್ಯ, ಆರೋಗ್ಯ ಲಭ್ಯವಾಗಿ, ರಾಜ್ಯದಲ್ಲಿ ಉತ್ತಮ ಮಳೆ-ಬೆಳೆಯಾಗಿ ಸಮೃದ್ಧಿ ನೆಲೆಸಲಿ ಎಂಬ ಉದ್ದೇಶದಿಂದ ಪಾದಯಾತ್ರೆ ಹಮ್ಮಿಕೊಳ್ಳಲಾಗುತ್ತಿದೆ. ಧರ್ಮ ಉಳಿದರೆ ಮಾತ್ರ ನಾವೆಲ್ಲರೂ ಉಳಿಯಲು ಸಾಧ್ಯ.

ಪಾದಯಾತ್ರೆಗೆ ಬರುವ ಭಕ್ತಾದಿಗಳಿಗೆ ನಾಗಾವಿಯಲ್ಲಿ, ವಿಮಲ್ ರೆಸಾರ್ಟ್‌ನಲ್ಲಿ ಉಪಹಾರದ ವ್ಯವಸ್ಥೆ ಇರುತ್ತದೆ. ವೆಂಕಟೇಶ್ವರ ದೇವರ ದರ್ಶನ ಆದ ನಂತರ ವೆಂಕಟೇಶ್ವರ ದೇವಸ್ಥಾನದಲ್ಲಿ ಸುಮಾರು 1500 ಭಕ್ತರಿಗೆ ಊಟದ ವ್ಯವಸ್ಥೆ ಹಮ್ಮಿಕೊಂಡಿರುತ್ತಾರೆ. ಸೇವೆ ಮಾಡಿದ ಎಲ್ಲ ಭಕ್ತಾದಿಗಳಿಗೆ ಪಾದಯಾತ್ರಿಕರಿಗೆ ವೆಂಕಟೇಶ್ವರ ದೇವರು ಸುಖ, ಶಾಂತಿ, ನೆಮ್ಮದಿ ಕೊಟ್ಟು ಕಾಪಾಡಲಿ ಎಂದು ಪಾದಯಾತ್ರೆ ಸಮಿತಿ ವತಿಯಿಂದ ಪ್ರಾರ್ಥಿಸಲಾಗುವುದು ಎಂದು ಬಾಬು ಬಾಕಳೆ ತಿಳಿಸಿದ್ದಾರೆ.

ಹಾಲು ಉತ್ಪಾದಕರ ಸಂಘಗಳ ಅಧ್ಯಕ್ಷರು, ಮುಖ್ಯ ಕಾರ್ಯನಿರ್ವಾಹಕರುಗಳಿಗೆ ವಿಶೇಷ ತರಬೇತಿ ಕಾರ್ಯಕ್ರಮ

# ರಾಜ್ಯದ ಹೈನುಗಾರಿಕೆ ಅಭಿವೃದ್ಧಿ ಪಥದಲ್ಲಿದೆ

■ವಿಜಯಸಾಕ್ಷಿ ಸುದ್ದಿ, ಗದಗ

ಸಹಕಾರ ಇಲಾಖೆ, ಗದಗ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ಗದಗ ಜಿಲ್ಲಾ ಸಹಕಾರ ಯೂನಿಯನ್, ಪಶುಪಾಲನಾ ಹಾಗೂ ಪಶುವೈದ್ಯ ಸೇವಾ ಇಲಾಖೆ ಗದಗ ಹಾಗೂ ಕೆ.ಎಂ.ಎಫ್ ಧಾರವಾಡ ಇವರುಗಳ ಸಂಯುಕ್ತ ಆಶ್ರಯದಲ್ಲಿ ಗದಗ ತಾಲೂಕಿನ ಹಾಲು ಉತ್ಪಾದಕರ ಸಹಕಾರ ಸಂಘಗಳ ಅಧ್ಯಕ್ಷರು, ಹಾಗೂ ಮುಖ್ಯ ಕಾರ್ಯನಿರ್ವಾಹಕರುಗಳಿಗೆ ವಿಶೇಷ ತರಬೇತಿ ಕಾರ್ಯಕ್ರಮವು ಮಂಗಳವಾರ ಪಶುವೈದ್ಯಕೀಯ ಪಾಲಿಕ್ಲಿನಿಕ್‌ನ ಸಭಾಭವನದಲ್ಲಿ ಜರುಗಿತು.

ಕರ್ನಾಟಕ ರಾಜ್ಯ ಸಹಕಾರಿ ಹಾಲು ಉತ್ಪಾದಕರ ಮಹಾಂಡಳದ ನಿರ್ದೇಶಕ ಎಚ್.ಜಿ. ಹಿರೇಗೌಡ್ರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಭಾರತವು ಹೈನುಗಾರಿಕೆ ಕ್ಷೇತ್ರದಲ್ಲಿ ಗಮನಾರ್ಹವಾದ ಸಾಧನೆ ಮಾಡಿದ್ದು, ಹಾಲು ಉತ್ಪಾದನೆಯಲ್ಲಿ ವಿಶ್ವದಲ್ಲಿಯೇ ಪ್ರಥಮ ಸ್ಥಾನದಲ್ಲಿದೆ. ಹಾಲು ಉತ್ಪಾದನೆಯಲ್ಲಿ ರಾಜ್ಯದ ಹೈನುಗಾರಿಕೆ ಉತ್ತಮವಾಗಿ ಸಾಗುತ್ತಿದೆ. ಹೈನುಗಾರಿಕಾ ವಲಯ ಗ್ರಾಮೀಣ ಪ್ರದೇಶಗಳ ಶ್ರೇಯೋಭಿವೃದ್ಧಿಗಾಗಿ ಶ್ರಮಿಸುತ್ತಿದೆ ಎಂದರು.

ಧಾರವಾಡ ಹಾಲು ಒಕ್ಕೂಟದ ವ್ಯವಸ್ಥಾಪಕರ ನಿರ್ದೇಶಕ ಡಿ.ಟಿ. ಕಳಸದ ಮಾತನಾಡುತ್ತಾ, ಗೋವಿನಿಂದ ಗ್ರಾಹಕರವರೆಗೆ ವಿಶ್ವ ಹೈನೋದ್ಯಮವು ತನ್ನ ಸುದೀರ್ಘ ಅಭಿವೃದ್ಧಿಯ ಹಾದಿಯಲ್ಲಿ ಸಾಗುತ್ತಿದೆ. ಜಾಗತಿಕ ಡೈರಿ ಕ್ಷೇತ್ರವು ಪಶುಪಾಲನೆಯಿಂದ ಗ್ರಾಹಕರವರೆಗಿನ ತನ್ನ ಕಾರ್ಯಚಟುವಟಿಕೆಯಲ್ಲಿನ ಶಕ್ತಿ, ಸಾಮರ್ಥ್ಯವನ್ನು ಅನಾವರಣಗೊಳಿಸುವ ಉದ್ದೇಶ ಹೊಂದಿದೆ. ಗ್ರಾಮೀಣ ಪ್ರದೇಶದಲ್ಲಿನ ಪಶುಪಾಲನೆಯಿಂದ ಆರಂಭವಾಗುವ ಹೈನೋದ್ಯಮದ ಕಾರ್ಯವ್ಯಾಪ್ತಿಯು ಹಾಲು ಮತ್ತು ಹಾಲಿನ ಉತ್ಪನ್ನಗಳನ್ನು ಅಗತ್ಯವಿರುವ ಗ್ರಾಹಕರ ಮನೆ ಬಾಗಿಲಿಗೆ ತಲುಪಿಸುವವರೆಗೆ ವಿಸ್ತಾರಗೊಂಡಿದೆ ಎಂದರು.



ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆಯ ಉಪನಿರ್ದೇಶಕ ಅರವಿಂದ ಎನ್.ನಾಗಜ್ಜನವರ ಮಾತನಾಡುತ್ತಾ, ಸಹಕಾರ ಸಂಘಗಳಲ್ಲಿ ಆರ್ಥಿಕ ತಃಖ್ತೆಗಳನ್ನು ಸಿದ್ಧಪಡಿಸುವುದು ಮತ್ತು ನಿಗದಿತ ಅವಧಿಯೊಳಗೆ ಲೆಕ್ಕಪರಿಶೋಧನೆ ಮಾಡಿಸಿ ವಾರ್ಷಿಕ ಮಹಾಸಭೆಗೆ ಮಂಡಿಸಿ ಅನುಮೋದನೆ ಪಡೆಯುವುದು ಅವಶ್ಯಕ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಯೂನಿಯನ್ ಅಧ್ಯಕ್ಷರಾದ ಸಿ.ಎಂ. ಪಾಟೀಲ ವಹಿಸಿ ಮಾತನಾಡುತ್ತಾ, ಸಮಾಜದಲ್ಲಿ ಆರ್ಥಿಕವಾಗಿ ಅಬಲರಾದವರು, ಅವಕಾಶ ವಂಚಿತ ಜನರಿದ್ದು, ಇಂತಹ ಜನರ ಆರ್ಥಿಕ, ಸಾಮಾಜಿಕ ಸ್ಥಿತಿಗತಿಯನ್ನು ಉತ್ತಮಗೊಳಿಸಲು ಹಾಲು ಉತ್ಪಾದಕರ ಸಹಕಾರ ಸಂಘಗಳಿಂದ ಮಾತ್ರ ಸಾಧ್ಯ ಎಂದರು.

ಕಾರ್ಯಕ್ರಮದಲ್ಲಿ ಸಹಕಾರ ಸಂಘಗಳ ಉಪನಿಬಂಧಕಿ ಎಸ್.ಎಸ್. ಕಬಾಡೆ, ಸಹಕಾರ ಸಹಕಾರ ಸಂಘಗಳ ಸಹಾಯಕ ನಿಬಂಧಕಿ ಪುಷ್ಪಾ ಕೆ.ಕಡಿವಾಳ, ಮುಖ್ಯ ಪಶುವೈದ್ಯಾಧಿಕಾರಿ (ಆಡಳಿತ) ಎಚ್.ವಾಯ್. ಹೊನ್ನಿನಾಯ್ಕರ, ಪಾಲಿಕ್ಲಿನಿಕ್‌ನ ಮುಖ್ಯ ಪಶುವೈದ್ಯಾಧಿಕಾರಿಗಳಾದ ಡಾ. ಹೀರಾಲಾಲ ಜಿನಗಿ, ಡಾ. ಆರ್.ವಾಯ್. ಗುರಿಕಾರ, ಧಾರವಾಡ ಹಾಲು ಒಕ್ಕೂಟದ ಜಿಲ್ಲಾ ಮುಖ್ಯಸ್ಥ ಪ್ರಸನ್ನ ಪಟ್ಟೇದ, ಹಾಲು ಒಕ್ಕೂಟದ ಗದಗ ಜಿಲ್ಲೆಯ ಎಲ್ಲಾ ವಿಸ್ತರಣಾಧಿಕಾರಿಗಳು ಉಪಸ್ಥಿತರಿದ್ದರು.

ಪಶುಪಾಲನಾ ಹಾಗೂ ಪಶುವೈದ್ಯ ಸೇವಾ ಇಲಾಖೆಯ ಉಪನಿರ್ದೇಶಕ ಎಚ್.ಬಿ. ಹುಲಗಣ್ಣವರ ಮಾತನಾಡಿ, ಗ್ರಾಮೀಣ ಪ್ರದೇಶದಲ್ಲಿ ತಳಿ ಅಭಿವೃದ್ಧಿ, ಹಸಿರು ಮೇವು ಮತ್ತು ಸಮತೋಲಿನ ಪಶು ಆಹಾರ ಉತ್ಪಾದನೆ, ಪಶು ವೈದ್ಯಕೀಯ ಸೇವೆ, ಹಾಲು ಶೇಖರಣೆ ಹೀಗೆ ಎಲ್ಲಾ ಹಂತಗಳಲ್ಲಿ ಆಧುನಿಕ ತಂತ್ರಜ್ಞಾನದ ಉಪಯೋಗವನ್ನು ವಿಸ್ತರಿಸಿಕೊಳ್ಳಲಾಗಿದೆ. ಇತ್ತೀಚಿನ ಕೃತಕ ಬುದ್ಧಿಮತ್ತೆ ತಂತ್ರಜ್ಞಾನದತ್ತಲೂ ಗಮನ ಹರಿಸಿರುವ ಹೈನೋದ್ಯಮ ಕ್ಷೇತ್ರವು ತನ್ನ ಕಾರ್ಯಕ್ಷಮತೆಯನ್ನು ವೃದ್ಧಿಸಿಕೊಂಡು ಉತ್ಪಾದನಾ ಮತ್ತು ಅನಗತ್ಯ ವೆಚ್ಚಗಳನ್ನು ನಿಯಂತ್ರಿಸಿ ಯಶಸ್ಸು ಕಂಡಿದೆ ಎಂದು ಹೇಳಿದರು.

ತರಬೇತಿ ಕಾರ್ಯಾಗಾರದಲ್ಲಿ ಡಾ. ವೀರೇಶ ತರಲಿ, ಡಾ. ಜಗದೀಶ್ ಎಸ್.ಮಟ್ಟಿ, ಡಾ. ಎಂ.ಬಿ. ಮಡಿವಾಳರ ವಿವಿಧ ವಿಷಯಗಳ ಕುರಿತು ಉಪನ್ಯಾಸ ನೀಡಿದರು. ನಾಗಾವಿ ಹಾಲು ಉತ್ಪಾದಕರ ಸಹಕಾರ ಸಂಘದ ಕಾರ್ಯದರ್ಶಿ ಕೇದಾರಸ್ವಾಮಿ ಶಿರಹಟ್ಟಿಮಠ ಪ್ರಾರ್ಥಿಸಿದರು. ಜಿಲ್ಲಾ ಸಹಕಾರ ಯೂನಿಯನ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಚಂದ್ರಶೇಖರ ಎಸ್.ಕರಿಯಪ್ಪನವರ ಸ್ವಾಗತಿಸಿ ನಿರೂಪಿಸಿದರು. ವಿಸ್ತರಣಾಧಿಕಾರಿ ದಿಲೀಪ್ ಆಯ್.ನದಾಫ್ ವಂದಿಸಿದರು.

ಡಿವೈಡರ್ ಅಳವಡಿಸದೇ ನಿರ್ಲಕ್ಷ್ಯ ತೋರುತ್ತಿರುವ ಲೋಕೋಪಯೋಗಿ ಇಲಾಖೆ

# ಕರವೇ ಸ್ವಾಭಿಮಾನಿ ಸೇನೆಯಿಂದ ಪ್ರತಿಭಟನೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಲಕ್ಷ್ಮೇಶ್ವರದ ಹೊಸ ಬಸ್ ನಿಲ್ದಾಣಕ್ಕೆ ಹೊಂದಿಕೊಂಡಿರುವ ಕೈಗಾ-ಇಳಕಲ್ ರಾಜ್ಯ ಹೆದ್ದಾರಿಯ ನಡುವೆ ಡಿವೈಡರ್ ಅಳವಡಿಸವಲ್ಲಿ ನಿರ್ಲಕ್ಷ್ಯ ತೋರುತ್ತಿರುವ ಲೋಕೋಪಯೋಗಿ ಇಲಾಖೆಯ ಕ್ರಮ ಖಂಡಿಸಿ ಕರವೇ ಸ್ವಾಭಿಮಾನಿ ಸೇನೆಯ ಜಿಲ್ಲಾಧ್ಯಕ್ಷ ಶರಣು ಗೋಡಿ ನೇತೃತ್ವದಲ್ಲಿ ಪ್ರತಿಭಟನೆ ನಡೆಸಿ ಮನವಿ ಸಲ್ಲಿಸಲಾಯಿತು.



ಈ ವೇಳೆ ಮಾತನಾಡಿದ ಜಿಲ್ಲಾಧ್ಯಕ್ಷ ಶರಣು ಗೋಡಿ, 2-3 ವರ್ಷಗಳ ಹಿಂದೆ ರಾಜ್ಯ ಹೆದ್ದಾರಿಯ ನಡುವೆ ಗದಗ ನಾಕಾದಿಂದ ಶಿಗ್ಲಿ ನಾಕಾವರೆಗೆ ಸಿಸಿ ರಸ್ತೆ ಮಾಡಿದ ವೇಳೆ ರಸ್ತೆ ಮಧ್ಯ ಡಿವೈಡರ್ ಅಳವಡಿಸುವಂತೆ ಕಳೆದ ಮೇ ತಿಂಗಳಲ್ಲಿ ಇಲಾಖೆಗೆ ಮನವಿ ಮಾಡಿ 20 ದಿನಗಳ ಗಡುವು ನೀಡಲಾಗಿತ್ತು. ಇದುವರೆಗೂ ಇದರ ಬಗ್ಗೆ ಯಾವುದೇ ಈ ಬಗ್ಗೆ ಪ್ರಗತಿಯಾಗಿಲ್ಲ. ಇದು ಇಲಾಖೆಯ ಬೇಜಬ್ದಾರಿತನಕ್ಕೆ ಸಾಕ್ಷಿಯಾಗಿದೆ. ಅತಿಯಾದ ಸಂಚಾರ ದಟ್ಟಣೆ ಇರುವ ರಸ್ತೆಯಾಗಿರುವದರಿಂದ ನಿತ್ಯ ಅನೇಕ ಅಪಘಾತಗಳು ಇಲ್ಲಿ ಸಂಭವಿಸುತ್ತಿವೆ. ವಿಭಜಕ ಇಲ್ಲದ್ದರಿಂದ ವಾಹನ ಸವಾರರು ಅಡ್ಡಾದಿಡ್ಡಿಯಾಗಿ ವಾಹನ ಚಲಾವಣೆ ಮಾಡುತ್ತಾರೆ. ಇದು ನಿಮ್ಮ ಕಣ್ಣಿಗೆ ಕಾಣುವುದಿಲ್ಲವೆ ಎಂದು ಪ್ರಶ್ನಿಸಿದರು.

ಲೋಕೋಪಯೋಗಿ ಇಲಾಖೆ ಎಇಇ ಫಕ್ಕೀರೇಶ ತಿಮ್ಮಾಪೂರ ಸ್ಥಳಕ್ಕೆ ಆಗಮಿಸಿ ಪ್ರತಿಭಟನಾಕಾರರ ಮನವೊಲಿಸಿ ಮನವಿ ಸ್ವೀಕರಿಸಿ, ಒಂದು ತಿಂಗಳೊಳಗಾಗಿ ರಸ್ತೆ ಡಿವೈಡರ್ ಮಾಡುವದಾಗಿ ಭರವಸೆ ನೀಡಿದ ನಂತರ ಪ್ರತಿಭಟನಾಕಾರರು ಪ್ರತಿಭಟನೆಯನ್ನು ಕೈಬಿಟ್ಟರು.

ತಾಲೂಕಾಧ್ಯಕ್ಷ ನಾಗೇಶ ಅಮರಾಪೂರ, ಕರವೇ ಸ್ವಾಭಿಮಾನಿ ಸೇನೆ ಜಿಲ್ಲಾ ಕಾರ್ಯಾಧ್ಯಕ್ಷ ಇಸ್ಮಾಯಿಲ್ ಆಡೂರ, ಯಲ್ಲಪ್ಪ ಹಂಜಗಿ, ಕೈಸರ್ ಅಹ್ಮದ್‌ಅಲಿ, ದುದ್ದು ಅಕ್ಕಿ, ಅಶ್ಪಾಕ್ ಬಾಗೋಡಿ, ಜ್ಯೋತಿ ಸೋಮಶೇಖರ, ಮಾಲತೇಶ ಉಮಚಗಿ, ಝರೀನಾ ಮುಲ್ಲಾ, ಶಕುಂತಲಾ ನೂಲ್ವಿ, ಮುತ್ತುರಾಜ್ ಗಡೆಪ್ಪನವರ, ಬಾಬು ಮನಿಯಾರ, ಇಲಿಯಾಸ್ ಮನಿಯಾರ್, ಇರ್ಫಾನ್ ಹರಪನಹಳ್ಳಿ, ಶರಣಪ್ಪ ಬಸಾಪೂರ, ಪೀರಸಾಬ ರಿತ್ತಿ, ನದೀಮ್ ಕುಂದಗೋಳ, ಮಂಜುನಾಥ ಲಮಾಣಿ, ಸಚಿನ್ ಲಮಾಣಿ, ಶರಣು ಬೆಳವಿಗಿ, ಪ್ರವೀಣ, ಅಭಿಷೇಕ ಸಾತಪೂತೆ, ಕಾರ್ತಿಕ ಬಳ್ಳಾರಿ ಸೇರಿದಂತೆ ನೂರಾರು ಜನರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

## ವೇತನ ಪಾವತಿಗೆ ಒತ್ತಾಯಿಸಿ ಧರಣಿ

■ವಿಜಯಸಾಕ್ಷಿ ಸುದ್ದಿ, ಗದಗ

ಮಹಾತ್ಮ ಗಾಂಧಿ ಉದ್ಯೋಗ ಖಾತರಿ ಯೋಜನೆಯಡಿ ಕಾರ್ಯ ನಿರ್ವಹಿಸುತ್ತಿರುವ ತಾಲೂಕು ವ್ಯಾಪ್ತಿಯ ಹೊರಗುತ್ತಿಗೆ ನೌಕರರು ಬಾಕಿ ಇರುವ ಆರು ತಿಂಗಳ ವೇತನ ಪಾವತಿಗೆ ಒತ್ತಾಯಿಸಿ ಉದ್ಯೋಗ ಖಾತ್ರಿ ಯೋಜನೆಯ ಎಲ್ಲ ಕಾರ್ಯಗಳನ್ನು ಸ್ಥಗಿತಗೊಳಿಸಿ ಸೋಮವಾರ ಕಚೇರಿ ಎದುರು ಅಸಹಕಾರ ಚಳುವಳಿ ಆರಂಭಿಸಿದರು.



ಕರ್ನಾಟಕ ರಾಜ್ಯ ನರೇಗಾ ನೌಕರರ ಕ್ಷೇಮಾಭಿವೃದ್ಧಿ ಸಂಘ ಮತ್ತು ಕರ್ನಾಟ ರಾಜ್ಯ ಬೇರ್ ಫೂಟ್ ಟೆಕ್ನಿಷಿಯನ್ ಕ್ಷೇಮಾಭಿವೃದ್ಧಿ ಸಂಘ ಇವುಗಳ ನಿರ್ದೇಶನದಂತೆ ಸಂಘದ ತಾಲೂಕು ಘಟಕದ ಸದಸ್ಯರು ಕೂಲಿಕಾರರಿಗೆ ನರೇಗಾ ಕೆಲಸ ಕೊಡಿಸುವುದು, ಹಳ್ಳಿಗಳಲ್ಲಿ ಆಸ್ತಿ ಸೃಜನೆಗಳಲ್ಲಿ ನರೇಗಾ ನೌಕರರ ಪಾತ್ರ ಬಹುಮುಖ್ಯವಾಗಿದೆ. ಆದರೆ, ನೌಕರರಿಗೆ ಪ್ರತಿ ತಿಂಗಳು ವೇತನ ಸರಿಯಾಗಿ ಆಗದೆ ಸಮಸ್ಯೆ ಎದುರಿಸುತ್ತಿದ್ದಾರೆ. ವಿವಿಧ ಹುದ್ದೆಗಳಲ್ಲಿ 25ಕ್ಕೂ ಹೆಚ್ಚು ಜನ ಕಾರ್ಯನಿರ್ವಹಿಸುತ್ತಿದ್ದಾರೆ. ಈ ಎಲ್ಲ ಸಿಬ್ಬಂದಿಯು 6 ತಿಂಗಳಿಂದ ಹಾಗೂ ಬಿಎಫ್‌ಟಿಯವರದು 4 ತಿಂಗಳಿಂದ ವೇತನ ಪಾವತಿಯಾಗಿಲ್ಲ. ಸರ್ಕಾರ ಕೂಡಲೇ ನ್ಯಾಯಯುತ ಬೇಡಿಕೆಗಳನ್ನು ಈಡೇರಿಸಬೇಕು ಎಂದು ಸಂಘದ ಸದಸ್ಯರು ವಿನಂತಿಸಿದರು.

ಸಂಘದ ತಾಲೂಕು ಪ್ರತಿನಿಧಿಗಳಾದ ವೀರೇಶ ಬಸನಗೌಡ್ರ, ಚಂದ್ರಶೇಖರ ಹಳ್ಳಿ, ನವೀನ ಬಸರಿ, ಪ್ರದೀಪ ನರೇಗಲ್ಲ, ಮಂಜುನಾಥ ಕುಲಕರ್ಣಿ, ಅಜಯ ಅಬ್ಬಿಗೇರಿ, ದಿನೇಶ ಮಲ್ಲನಗೌಡ್ರ, ಪ್ರವೀಣ ದೂಳಣ್ಣನವರ, ಅರುಣ ಕಪ್ಪರದ, ಅಲ್ತಾಫ್ ಅಮ್ಮಿನಬಾವಿ, ಪ್ರಶಾಂತ ಯಾವಗಲ್ಲಮಠ, ಸಿದ್ದಪ್ಪ ಸೋಮನಕಟ್ಟಿ, ದಾವಲಸಾಬ್ ಚಲ್ಲಮರದ, ಬಸವರಾಜ ಪಟ್ಟಣದ, ಮಂಜುನಾಥ ಬಂಡಿವಾಡ, ಮೈಲಾರಪ್ಪ ಸೋಮನಕಟ್ಟಿ ಇತರರು ಇದ್ದರು.

## ಮಾರನಬಸರಿ ಗ್ರಾಮ ಭಾವೈಕ್ಯತೆಗೆ ಮಾದರಿ

■ವಿಜಯಸಾಕ್ಷಿ ಸುದ್ದಿ, ರೋಣ

ಮಾರನಬಸರಿ ಗ್ರಾಮದಲ್ಲಿ ಹಿಂದೂ-ಮುಸ್ಲಿಂ ಬಾಂಧವರು ಸೇರಿಕೊಂಡು ಭಕ್ತಿಯಿಂದ ಮೊಹರಂ ಹಬ್ಬವನ್ನು ಆಚರಿಸುವ ಮೂಲಕ ಭಾವೈಕ್ಯತೆಗೆ ಮಾದರಿಯಾಗಿದ್ದಾರೆ ಎಂದು ರಾಜ್ಯ ಖನಿಜ ನಿಗಮದ ಅಧ್ಯಕ್ಷ, ಶಾಸಕರಾದ ಜಿ.ಎಸ್. ಪಾಟೀಲ ಹೇಳಿದರು.



ಅವರು ರವಿವಾರ ಮೊಹರಂ ಹಬ್ಬದ ನಿಮಿತ್ತ ಮಾರನಬಸರಿ ಗ್ರಾಮಕ್ಕೆ ಆಗಮಿಸಿ ಅಲ್ಲಿ ದೇವರುಗಳ ದರ್ಶನ ಪಡೆದು ಭಕ್ತರನ್ನುದ್ದೇಶಿಸಿ ಮಾತನಾಡಿದರು.

ಗ್ರಾಮದ ಸರ್ವ ಜನಾಂಗದವರು ಎಲ್ಲ ಹಬ್ಬ ಮತ್ತು ಜಾತ್ರೆಗಳನ್ನು ಆಚರಿಸುವ ಮೂಲಕ ಏಕತೆ ಹಾಗೂ ಸಹೋದರತೆಯನ್ನು ಮೆರೆಯುತ್ತಿರುವುದು ಮೆಚ್ಚುವ ಸಂಗತಿಯಾಗಿದೆ. ಮಾರನಬಸರಿ ಗ್ರಾಮ ಬರಿ ಗದಗ ಜಿಲ್ಲೆಗಲ್ಲ, ನಾಡಿಗೇ ಮಾದರಿಯಾಗಿದೆ ಎಂದರು.

ನಾನು ಸಹ ಪ್ರತಿ ವರ್ಷ ಭಕ್ತಿಯಿಂದ ಹಬ್ಬದಲ್ಲಿ ಭಾಗಿಯಾಗಿ ದೇವರ ದರ್ಶನ ಪಡೆದಿರುವುದು ನನ್ನ ಸೌಭಾಗ್ಯವಾಗಿದೆ ಎಂದರು.

ಇದೇ ಸಂಧರ್ಭದಲ್ಲಿ ಎರಡೂ ಮಸೂತಿಗಳ ಹಿರಿಯರು ಶಾಸಕ ಜಿ.ಎಸ್. ಪಾಟೀಲರನ್ನು ಸನ್ಮಾನಿಸಿದರು.

ಕತ್ತಲ್ ರಾತ್ರಿಯಂದು 20 ಸಾವಿರಕ್ಕೂ ಹೆಚ್ಚಿನ ಭಕ್ತರು ಆಗಮಿಸಿ ಅಲ್ಲೆ ದೇವರುಗಳಿಗೆ ಸಕ್ಕರೆ ನೈವೇದ್ಯವನ್ನು ಅರ್ಪಿಸಿ ಧನ್ಯತೆ ಮೆರೆದರು. ಬಸವರಾಜ ನವಲಗುಂದ, ಯೂಸುಫ್ ಇಟಗಿ, ಶರಣಪ್ಪ ಕುರಿ, ಶೇಖರಗೌಡ ಪಾಟೀಲ, ಅಂದಪ್ಪ ಮರಡಿ, ಎಸ್. ಎಚ್. ಹಾದಿಮನಿ, ಮರ್ತುಜಸಾಬ ಮೋತೆಖಾನ್, ಅಡಿವೆಪ್ಪ ಜಿಗಳೂರ, ಈರಪ್ಪ ನಿಡಗುಂದಿ, ಅಂದಾನಯ್ಯ ಶಾಂತಗೇರಮಠ ಸೇರಿದಂತೆ ಗ್ರಾಪಂ ಅಧ್ಯಕ್ಷರು, ಉಪಾಧ್ಯಕ್ಷರು, ಸರ್ವ ಸದಸ್ಯರು ಹಾಗೂ ಎರಡೂ ಮಸೂತಿಗಳ ಹಿರಿಯರು ಉಪಸ್ಥಿತರಿದ್ದರು.

## ಯುವನಿಧಿ ಯೋಜನೆ: ವಿಶೇಷ ನೋಂದಣಿ ಅಭಿಯಾನ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಸರಕಾರದ ಮಹತ್ವಾಕಾಂಕ್ಷಿ ಯೋಜನೆಯಾದ "ಯುವನಿಧಿ" ಯೋಜನೆಯಲ್ಲಿ 2022-23, 2023-24, 2024-25 ಮತ್ತು 2025-26 ನೆ ಸಾಲಿನಲ್ಲಿ ಡಿಪ್ಲೋಮಾ, ಪದವಿ / ಸ್ನಾತ್ತಕೋತ್ತರ ಪದವಿಯಲ್ಲಿ ತೇರ್ಗಡೆಯಾಗಿ ಉದ್ಯೋಗ ಸಿಗದ ಅರ್ಹ ಅಭ್ಯರ್ಥಿಗಳು https://sevasindhugs.karnataka.gov.in ಸೇವಾಸಿಂಧು ವೆಬ್ ಪೋರ್ಟಲ್ ಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಲು ದಿನಾಂಕ: 07-07-2025 ರಿಂದ 07-08-2025 ರ ವರೆಗೆ ವಿಶೇಷ ನೋಂದಣಿ ಅಭಿಯಾನವನ್ನು, ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಗದಗ ಹಾಗೂ ಗದಗ ವ್ಯಾಪ್ತಿಯ ವಿಶ್ವವಿದ್ಯಾಲಯ, ಸರ್ಕಾರಿ/ಅನುದಾನಿತ ಪದವಿ/ಸ್ನಾತಕೋತ್ತರ ಪದವಿ ಮತ್ತು ಡಿಪ್ಲೋಮಾ, ಕಾಲೇಜುಗಳಲ್ಲಿ ಹಮ್ಮಿಕೊಳ್ಳಲಾಗಿದೆ. ಅರ್ಹ ಫಲಾನುಭವಿಗಳು ಈ ಸದಾವಕಾಶವನ್ನು ಉಪಯೋಗಿಸಿಕೊಂಡು ಇದರ ಪ್ರಯೋಜನೆಯನ್ನು ಪಡೆದುಕೊಳ್ಳಬಹುದಾಗಿದೆ. ಇದಲ್ಲದೆ ಅಭ್ಯರ್ಥಿಗಳು ಕರ್ನಾಟಕ ಒನ್/ಗ್ರಾಮ ಒನ್ ಮತ್ತು ಬಾಪೂಜಿ ಕೇಂದ್ರಗಳಲ್ಲಿ ಯುವನಿಧಿ ಯೋಜನೆಗೆ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಕಡ್ಡಾಯವಾಗಿ ಆಧಾರ್ ಸಿಡೆಡ್, ಬ್ಯಾಂಕ್ ಖಾತೆ, ಹಾಗೂ ಆಧಾರ್ ಲಿಂಕ್ಡ್ ಮೊಬೈಲ್ ನಂಬರನ್ನು ಹೊಂದಿರತಕ್ಕದ್ದು, ಅರ್ಜಿ ಸಲ್ಲಿಸಿದ ನಂತರ ಸೇವಾ ಸಿಂದು ಪೋರ್ಟ್ ನಲ್ಲಿ ತಮ್ಮ ಅರ್ಜಿಯು ಯಾವ ಹಂತದಲ್ಲಿ ಇದೆ ಎಂಬುದನ್ನು ಪರಿಶೀಲಿಸಿಕೊಂಡು, ಒಂದು ವೇಳೆ ಅರ್ಜಿಯು ಅಪ್ರೂವ್ ಆಗದೆ ಇರುವ ಸಂದರ್ಭದಲ್ಲಿ ಸೂಚಿಸಲ್ಪಟ್ಟ ಇಲಾಖೆಯ ಕಚೇರಿಗಳಿಗೆ ತಮ್ಮ ಎಲ್ಲಾ ಮೂಲ ಅಂಕಪಟ್ಟಿ ಹಾಗೂ ಇತರೆ ಪ್ರಮಾಣ ಪತ್ರಗಳೊಂದಿಗೆ ಖುದ್ದಾಗಿ ಭೇಟಿ ನೀಡಿ ಅಪ್ರೂವ್ ಮಾಡಿಸಿಕೊಳ್ಳಲು ಈ ಮೂಲಕ ತಿಳಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ: 1800-599-7154 ಸಂಪರ್ಕಿಸಿ, ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಗದಗ ಇವರಿಗೆ 08372-220609 ಸಂಖ್ಯೆ ಸಂಪರ್ಕಿಸಬಹುದೆಂದು ಜಿಲ್ಲಾ ಉದ್ಯೋಗಾಧಿಕಾರಿಗಳು ತಿಳಿಸಿದ್ದಾರೆ.

## ದ್ವಿಚಕ್ರ ವಾಹನ-ಖಾಸಗಿ ಬಸ್ ನಡುವೆ ಅಪಘಾತ: ಯುವಕ ಸ್ಥಳದಲ್ಲೇ ಸಾವು

■ವಿಜಯಸಾಕ್ಷಿ ಸುದ್ದಿ, ದೊಡ್ಡಬಳ್ಳಾಪುರ

ಖಾಸಗಿ ಕಂಪನಿಗೆ ಸೇರಿದ ಬಸ್ ಮತ್ತು ದ್ವಿಚಕ್ರ ವಾಹನದ ನಡುವೆ ಸಂಭವಿಸಿದ ಭೀಕರ ಅಪಘಾತದಲ್ಲಿ ಯುವಕನೊಬ್ಬ ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ತಡರಾತ್ರಿಯ ವೇಳೆ ರಘುನಾಥಪುರ ಬಳಿ ನಡೆದಿದೆ.

ದೇವನಹಳ್ಳಿ ಮೂಲದ ಸಾಗರ್ (20) ಎಂಬ ಯುವಕನೇ ಮೃತನು. ಅಪಘಾತದ ವೇಳೆ ಸಾಗರ್ ಓಡಿಸುತ್ತಿದ್ದ ಬುಲೆಟ್ ಬೈಕ್ ಬಸ್‌ಗೆ ಗುದ್ದಿದ ಪರಿಣಾಮ ಈ ದುರ್ಘಟನೆ ಸಂಭವಿಸಿದೆ. ಸಾಗರ್ ಸ್ಥಳದಲ್ಲೇ ಪ್ರಾಣ ಕಳೆದುಕೊಂಡಿದ್ದಾನೆ.

ಫಾಕ್ಸ್‌ಕಾನ್ ಕಂಪನಿಯಿಂದ ಕಾರ್ಮಿಕರನ್ನು ಕರೆದುಕೊಂಡು ಹೋಗುತ್ತಿದ್ದ ಬಸ್ ಈ ಅವಘಡಕ್ಕೆ ಒಳಪಟ್ಟಿದೆ. ಘಟನೆಯ ಕುರಿತು ದೊಡ್ಡಬಳ್ಳಾಪುರ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಆರ್.ಎಸ್. ಹೆಬಸೂರರಿಗೆ ಶ್ರದ್ಧಾಂಜಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಸ್ಥಳೀಯ ಹುಲಕೋಟಿ ಸಹಕಾರಿ ಶಿಕ್ಷಣ ಸಂಸ್ಥೆಯ ಪದವಿಪೂರ್ವ ಮಹಾವಿದ್ಯಾಲಯದಲ್ಲಿ ಇತಿಹಾಸ ಉಪನ್ಯಾಸಕರಾಗಿ ಸೇವೆ ಸಲ್ಲಿಸುತ್ತಿದ್ದ ಆರ್.ಎಸ್. ಹೆಬಸೂರವರ ನಿಧನದ ನಿಮಿತ್ತ ಮಹಾವಿದ್ಯಾಲಯದಲ್ಲಿ ಶ್ರದ್ಧಾಂಜಲಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು. ಸಂಸ್ಥೆಯ ಅಧ್ಯಕ್ಷರಾದ ಆರ್.ಎಮ್. ಮೂಲಿಮನಿ, ಗೌರವ ಕಾರ್ಯದರ್ಶಿ ಮುಕುಂದ ಪೋತ್ನಿಸ್, ಆಡಳಿತಾಧಿಕಾರಿ ಆರ್.



ಎಸ್. ಪಾಟೀಲ, ಪ್ರಾಚಾರ್ಯ ಬಿ.ಬಿ. ಪಾಟೀಲ ಮಾತನಾಡಿ, ಆರ್.ಎಸ್. ಹೆಬಸೂರರು ಕಳೆದ 34 ವರ್ಷಗಳಿಂದ ಇತಿಹಾಸ ಉಪನ್ಯಾಸಕರಾಗಿ, ಸಂಘಟನಾ ಚತುರರಾಗಿ ವಿದ್ಯಾರ್ಥಿಗಳ ಅಚ್ಚುಮೆಚ್ಚಿನ ಉಪನ್ಯಾಸಕರಾಗಿ, ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗುರುತಿಸಿ, ಉತ್ತಮ ಮಾರ್ಗದರ್ಶನ ನೀಡಿದ್ದರು. ಅವರ ಆತ್ಮಕ್ಕೆ ಚಿರಶಾಂತಿ ದೊರಕಲಿ ಎಂದು ಶ್ರದ್ಧಾಂಜಲಿ ಅರ್ಪಿಸಿದರು. ಈ ಸಂದರ್ಭದಲ್ಲಿ ಪದವಿ ಹಾಗೂ ಪದವಿಪೂರ್ವ ಮಹಾವಿದ್ಯಾಲಯದ ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## 3 ದಿನಗಳ ಅಧ್ಯಯನ ಶಿಬಿರ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಸಾಹಿತ್ಯ ಅಕಾಡೆಮಿಯು ಪತ್ರಕರ್ತರಿಗೆ ಕನ್ನಡ ಸಾಹಿತ್ಯ ಎಂಬ ಹೆಸರಿನಲ್ಲಿ 3 ದಿನಗಳ ಅಧ್ಯಯನ ಶಿಬಿರವನ್ನು ಆಗಸ್ಟ್ 3ನೇ ವಾರ ಅಥವಾ ಕೊನೆಯ ವಾರದಲ್ಲಿ ನಡೆಸಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತಿಯಿರುವ 20 ರಿಂದ 40 ವರ್ಷ ವಯಸ್ಸುಳ್ಳ ಈಗಾಗಲೇ ಪತ್ರಿಕೆಯಲ್ಲಿ ಕೆಲಸ ಮಾಡುತ್ತಿರುವವರು, ಪತ್ರಿಕೋದ್ಯಮ ಪದವಿ ಪಡೆದವರು ಹಾಗೂ ಆಸಕ್ತಿಯುಳ್ಳವರು ರಾಜ್ಯದ ಎಲ್ಲ ಭಾಗದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಕೊನೆಯ ದಿನ ಜುಲೈ 25 ಆಗಿದ್ದು, ಆಸಕ್ತ ಅಭ್ಯರ್ಥಿಗಳು ಕರ್ನಾಟಕ ಸಾಹಿತ್ಯ ಅಕಾಡೆಮಿಯ ವೆಬ್ ಸೈಟ್ https://sahithyaacademy.karnataka.gov.in ದಿಂದ ಅರ್ಜಿ ನಮೂನೆ ಹಾಗೂ ವಿವರಗಳನ್ನು ಪಡೆದುಕೊಳ್ಳಬಹುದಾಗಿದೆ.


## ಗ್ರಾಮ ಪಂಚಾಯತ ಕಾರ್ಯಾಲಯ, ಅಂತೂರ

ತಾಲೂಕ ; ಗದಗ ಜಿಲ್ಲಾ:-ಗದಗ

ಗದಗ ಸಂ.ಗ್ರಾ.ಪಂ.ಅ/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2025-26 ದಿ: 08-07-2025

### ಃ ದರಪಟ್ಟಿ ಪ್ರಕಟಣೆ ಃ

ಅಧ್ಯಕ್ಷರು/ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಅಂತೂರ ಇವರು 2025-26ನೇ ಸಾಲಿನ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಫಾರಂಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ.ಸಂ. | ಕಾಮಗಾರಿ ಹೆಸರು | ಟೆಂಡರ್ ಮೊತ್ತ | ಖಾಲಿ ಟೆಂಡರ್ ಫಾರಂ ಬೆಲೆ (ರೂ.ಗಳಲ್ಲಿ) | ಷರಾ |
|---|---|---|---|---|
| | 1514001002-24-148 ಬೆಂತೂರ ಗ್ರಾಮದ ಬೂದೀಶ್ವರ ಮಠದ ಏರಿಯಾದ ಆಲೂರ ಮನೆಯಿಂದ ಪಾಟೀಲರವರ ಮನೆಯವರೆಗೆ ಸಿಸಿ ರಸ್ತೆ ನಿರ್ಮಾಣ | 144233.00 | 500.00 | |

ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರಂಗಾಗಿ ಅರ್ಜಿ ವಿತರಿಸುವ ದಿನಾಂಕ:09-07-2025 ರಿಂದ ರವರೆಗೆ ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವೀಕರಿಸುವ ದಿನಾಂಕ: 17-07-2025 ಮುಂಜಾನೆ 10.00 ಗಂಟೆಯಿಂದ ಮಧ್ಯಾಹ್ನ 2.30 ಗಂಟೆವರೆಗೆ. ತೆರೆಯುವ ದಿನಾಂಕ ಹಾಗೂ ಸಮಯ: 18-07-2025 ರ ಮಧ್ಯಾಹ್ನ 3.00 ಗಂಟೆ

ನಿಬಂಧನೆಗಳು :

1) ಷರತ್ತು/ನಿಬಂಧನೆಗಳಿಗೆ, ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ ಹಾಗೂ ರಜಾ ದಿನಗಳನ್ನು ಹೊರತುಪಡಿಸಿ ಗ್ರಾಮ ಪಂಚಾಯತ ಅಂತೂರದಲ್ಲಿ ಮಾಹಿತಿ ಪಡೆಯಬಹುದಾಗಿದೆ.

ಸಹಿ ಆಗಿದೆ/-
**ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು**
**ಗ್ರಾಮ ಪಂಚಾಯತಿ ಅಂತೂರ**

ಸಹಿ ಆಗಿದೆ/-
**ಅಧ್ಯಕ್ಷರು**
**ಗ್ರಾಮ ಪಂಚಾಯತಿ ಅಂತೂರ**


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka